# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –256 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:05–05–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 256 | RNI No: KARKAN/2023/88462 | KA/SK/CTA-874/2024-2026 | Chitradurga | Date: 05-05-2025 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಅಭಿವೃದ್ಧಿ ಪರ ಚಿಂತನೆಗೆ ಸುಕೋಬ್ಯಾಂಕ್ ಸಹಕಾರಿ: ಆರ್.ಪಾಲಯ್ಯ 2
ಶ್ರಮಜೀವಿ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ಬದ್ಧ: ಶಾಸಕ ಟಿ.ರಘುಮೂರ್ತಿ 3
ನಮ್ಮ ಕುಟುಂಬದ ಹೆಣ್ಣು ಮಕ್ಕಳಿಗೂ ಹೀಗೆ ಆಗುವ ಮುನ್ನ ಎಚ್ಚರಗೊಳ್ಳಿ...... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ರೈಲಿಗೆ ಸಿಕ್ಕಿ ವ್ಯಕ್ತಿ ಸಾವು: ಗುರುತು ಪತ್ತೆಗೆ ಮನವಿ

» ಚಿತ್ರದುರ್ಗ

ಮೇ.3 ರಂದು ಮಧ್ಯಾಹ್ನ 1:30 ಗಂಟೆಗೆ ಚಿತ್ರದುರ್ಗ ಹತ್ತಿರದ ಬೊಮ್ಮೇನಹಳ್ಳಿ ಗ್ರಾಮದ ರೈಲು ಹಳಿಗಳ ಮೇಲೆ ಸುಮಾರು 45 ವರ್ಷದ ವ್ಯಕ್ತಿ ಪ್ಯಾಸೇಂಜರ್ ರೈಲುಗಾಡಿ ಸಿಕ್ಕಿ ತ್ರೀವ್ರತರನಾಗಿ ಗಾಯಗೊಂಡಿದ್ದಾನೆ. ಈ ವ್ಯಕ್ತಿಯನ್ನು ಹೊಳಲ್ಕೆರೆ ಆಸ್ಪತ್ರೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾದೆ ಮೃತಪಟ್ಟಿರುತ್ತಾನೆ. ಈ ಕುರಿತು ದಾವಣಗೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತ ವ್ಯಕ್ತಿಯು ಸಮಾರು 40 ರಿಂದ 50 ವರ್ಷದವನಾಗಿದ್ದು, 5.5 ಅಡಿ ಎತ್ತರ, ಅಗಲವಾದ ಮುಖ, ಸಾಧಾರಣ ಮೈಕಟ್ಟು, ಕಪ್ಪುಬಿಳಿ ಮಿಶ್ರಿತ ಕೂದಲು ಹಾಗೂ ಗಡ್ಡ ಬಿಟ್ಟಿರುತ್ತಾನೆ. ಅಪಘಾತ ನಡೆದ ವೇಳೆಯಲ್ಲಿ ಹಳದಿ ಬಣ್ಣದ ಚೆಕ್ಸ್ ರೆಡಿಮೇಡ್ ಶರ್ಟ್, ಬಿಳಿ ಬಣ್ಣದ ಸ್ಯಾಂಡೋ ಬನಿಯನ್, ರಾಮ್ ರಾಜ್ ನೀಲಿ ಅಂಡರ್ ವೇರ್, ಹಸಿರು ಬಣ್ಣದ ಪಟ್ಟಿ ಪಟ್ಟಿ ಪಂಚೆ ಧರಿಸಿರುತ್ತಾನೆ. ಮೃತ ವ್ಯಕ್ತಿಯ ಗುರುತು ಪತ್ತೆಯಾದಲ್ಲಿ ದಾವಣಗೆರೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08192–259643, ಮೊಬೈಲ್ ಸಂಖ್ಯೆ 9480802123, ರೈಲ್ವೇ ಕಂಟ್ರೋಲ್ ರೂಮ್ 080–22871291 ಗೆ ಕರೆ ಮಾಡುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

### ಜಿ.ವಿ.ಅಂಜಿನಪ್ಪಸ್ಮಾರಕ ಪ್ರೌಢಶಾಲೆ: ಎಸ್ಸೆಸ್ಸೆಲ್ಸಿ 78% ಫಲಿತಾಂಶ



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಬೇಡರೆಡ್ಡಿಹಳ್ಳಿ ಜಿ.ವಿ.ಅಂಜಿನಪ್ಪಸ್ಮಾರಕ ಗ್ರಾಮಾಂತರ ಪ್ರೌಢಶಾಲೆ ಪ್ರಸ್ತುತ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ. 78ರಷ್ಟು ಫಲಿತಾಂಶ ದಾಖಲಿಸಿದೆ ಎಂದು ಮುಖ್ಯೋಪಾಧ್ಯಾಯರು ತಿಳಿಸಿದ್ದಾರೆ. ಅವರು ಪತ್ರಿಕೆಗೆ ಮಾಹಿತಿ ನೀಡಿ, ಒಟ್ಟು 36 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 28 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಎಸ್.ಮೇಘನಾ–625ಕ್ಕೆ600 ಅಂಕ ಪಡೆದು ಶೇ.96ರಷ್ಟು ಸಾಧನೆ ಮಾಡಿದ್ದಾರೆ. ಎಲ್.ಶರತ್‌ಬಾಬು–625ಕ್ಕೆ593 ಅಂಕಪಡೆದು ಶೇ.95, ಎಸ್.ಸೌಮ್ಯ–625ಕ್ಕೆ589 ಅಂಕಪಡೆದು ಶೇ.94ರಷ್ಟು ಸಾಧನೆ ಮಾಡಿದ್ದಾರೆ. ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳನ್ನು ಶಾಲಾ ಆಡಳಿತಮಂಡಳಿ ಹಾಗೂ ಶಿಕ್ಷಕ ವೃಂದ ಅಭಿನಂದಿಸಿದೆ.

### ಗೋಪನಹಳ್ಳಿ: ಬಾಪೂಜಿ ಗ್ರಾಮಾಂತರ ಪ್ರೌಢಶಾಲೆಗೆ ಶೇ.84ರಷ್ಟು ಫಲಿತಾಂಶ

» ಚಳ್ಳಕೆರೆ

ಬಾಪೂಜಿ ವಿದ್ಯಾಸಂಸ್ಥೆಯ ಗೋಪನಹಳ್ಳಿ ಗ್ರಾಮಾಂತರ ಪ್ರೌಢಶಾಲೆ ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.84ರಷ್ಟು ಫಲಿತಾಂಶ ಪಡೆದಿದೆ ಎಂದು ಓ.ರಾಮಲಿಂಗಪ್ಪ ತಿಳಿಸಿದರು. ಅವರು ಪತ್ರಿಕೆಗೆ ಮಾಹಿತಿ ನೀಡಿ, ಮೂವರು ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 13ವಿದ್ಯಾರ್ಥಿಗಳು ಪ್ರಥಮ ದರ್ಜೆ, ಇಬ್ಬರು ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಜಿ.ಎನ್.ಮೇಘನ 625ಕ್ಕೆ 579 ಅಂಕ ಪಡೆದು ಶೇ.92.64 ಫಲಿತಾಂಶ ದಾಖಲಿಸಿದ್ದಾರೆಂದು ತಿಳಿಸಿದ್ದಾರೆ.

### ಸೋಮಗುದ್ದು ರಸ್ತೆ ಜೂಜಾಟ: 1210ರೂ ವಶ.

» ಚಳ್ಳಕೆರೆ

ಸೋಮಗುದ್ದು ರಸ್ತೆಯ ಮಾರಮ್ಮದೇವಸ್ಥಾನದ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಜೂಜಾಟ ವಾಡುತ್ತಿದ್ದ ದೇವರಾಜ ಇತರೆ ಮೂವರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 1210ರೂಗಳನ್ನು ವಶಪಡಿಸಿಕೊಂಡಿದ್ದಾರೆ. ಖಚಿತ ವರ್ತಮಾನದ ಮೇರೆಗೆ ಪೇದೆ ಶಂಕರಣ್ಣ, ನಂದೀಶ್, ಶ್ರೀಧರವಸಂತಧರೆಣ್ಣನವರ್ ಮತ್ತು ಎಚ್.ಮಂಜಪ್ಪ ಸ್ಥಳಕ್ಕೆ ಭೇಟಿ ನೀಡಿ ಒಟ್ಟು ನಾಲ್ವರು ಆರೋಪಿಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ.

## ಮೇ. 20 ರಂದು ಹೊಸಪೇಟೆಯಲ್ಲಿ ಸರ್ಕಾರದ ಎರಡು ವರ್ಷಗಳ ಸಾಧನಾ ಸಮಾವೇಶ


### ಜಿಲ್ಲೆಯ ಕಂದಾಯ ಗ್ರಾಮಗಳ ಸುಮಾರು ಹತ್ತು ಸಾವಿರ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆಗೆ ಭರದ ಸಿದ್ಧತೆ

# ಡಿಸಿಯಿಂದ ಹಕ್ಕುಪತ್ರ ತಯಾರಿಕೆ ಪರಿಶೀಲನೆ

» ಚಿತ್ರದುರ್ಗ

ಜಿಲ್ಲೆಯಲ್ಲಿನಹಟ್ಟಿ,ತಾಂಡಾಸೇರಿದಂತೆಒಟ್ಟು 299 ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಿಸಲಾಗಿದ್ದು, ಸರ್ಕಾರದ ಸೂಚನೆಯಂತೆ ಈ ಗ್ರಾಮಗಳ ಜನರ ಆಸ್ತಿಗಳನ್ನು ನೊಂದಣಿ ಮಾಡಿಸಿ, ಹಕ್ಕುಪತ್ರ ಹಾಗೂ ಇ–ಸ್ವತ್ತುಗಳನ್ನು ತಯಾರಿಸುವ ಕಾರ್ಯ ಜಿಲ್ಲೆಯಲ್ಲಿ ಭರದಿಂದ ಸಾಗಿದ್ದು, ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಹಾಗೂ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಭಾನುವಾರ ಜಿಲ್ಲೆಯ ತಹಸಿಲ್ದಾರರ ಕಚೇರಿ, ಉಪನೊಂದಣಾಧಿಕಾರಿಗಳ ಕಚೇರಿಗಳಿಗೆ ಖುದ್ದು ಭೇಟಿ ನೀಡಿ ಸಿದ್ಧತಾ ಕಾರ್ಯ ಪರಿಶೀಲನೆ ನಡೆಸಿದರು.

ಹಲವು ದಶಕಗಳಿಂದ ಆಸ್ತಿಗಳಿಗೆ ಹಕ್ಕುಪತ್ರವಿಲ್ಲದೆ ಪರಿತಪಿಸುತ್ತಿದ್ದ ಬಡ ಜನರ ಶ್ರೇಯೋಭಿವೃದ್ಧಿಗಾಗಿ ಹಟ್ಟಿ, ತಾಂಡಾ ಮುಂತಾದ ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳೆಂದು ಘೋಷಿಸಿ, ಆ ಜನವಸತಿ ಪ್ರದೇಶಗಳ ಜನರಿಗೆ ಆಸ್ತಿಗಳನ್ನು ನೊಂದಣಿ ಮಾಡಿಸಿ, ಹಕ್ಕುಪತ್ರ ಹಾಗೂ ಇ–ಸ್ವತ್ತು ಕೂಡ ವಿತರಿಸುವಂತೆ ಸರ್ಕಾರ ಸೂಚನೆ ನೀಡಿದೆ. ಪ್ರಸಕ್ತ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳು ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಇದೇ ಮೇ. 20 ರಂದು ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿ ಸರ್ಕಾರದ ಎರಡು ವರ್ಷಗಳ ಸಾಧನಾ ಸಮಾವೇಶ ಹಮ್ಮಿಕೊಂಡಿದ್ದು, ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕಂದಾಯ ಸಚಿವ ಕೃಷ್ಣಭೈರೇಗೌಡ ಅವರ ಆಶಯದಂತೆ ಎಲ್ಲ ಕಂದಾಯ ಗ್ರಾಮಗಳ ಜನರಿಗೆ ಹಕ್ಕುಪತ್ರ ವಿತರಿಸುವ ಸಮಾರಂಭ ಆಯೋಜಿಸಲಾಗಿದೆ. ಉಳುವವನೇ ಭೂಮಿಯ ಒಡೆಯ ಎನ್ನುವಂತೆ, ವಾಸಿಸುವವನೇ ಮನೆಯ ಒಡೆಯ ಎನ್ನುವ ರೀತಿ, ಹಟ್ಟಿ, ಹಾಡಿ, ತಾಂಡಾಗಳಲ್ಲಿ ವಾಸಿಸುತ್ತಿರುವ ಜನರಿಗೆ ಅವರ ಮನೆಯ ಆಸ್ತಿಯ ಹಕ್ಕುಪತ್ರಗಳನ್ನು ವಿತರಿಸಿ, ಬಡವರಿಗೆ ಆಸ್ತಿ ದಾಖಲೆಗಳನ್ನು ಒಪ್ಪಿಸಬೇಕು ಎನ್ನುವುದು ಸರ್ಕಾರದ ಆಶಯವಾಗಿದೆ. ಮೇ. 20 ರಂದು ಜರುಗುವ ಸಾಧನಾ ಸಮಾವೇಶ ಕಾರ್ಯಕ್ರಮದಲ್ಲಿ ಚಿತ್ರದುರ್ಗ ಜಿಲ್ಲೆಯ 299 ಕಂದಾಯ ಗ್ರಾಮಗಳ ಸುಮಾರು 10 ಸಾವಿರಕ್ಕೂ ಹೆಚ್ಚು ಫಲಾನುಭವಿಗಳಿಗೂ ಹಕ್ಕುಪತ್ರ ವಿತರಿಸಲು ಸಿದ್ಧತೆಗಳನ್ನು ಪ್ರಾರಂಭಿಸಲಾಗಿದೆ. ಈಗಾಗಲೆ ಜಿಲ್ಲೆಯಲ್ಲಿ ಸುಮಾರು 6500 ಕ್ಕೂ ಹೆಚ್ಚು ಹಕ್ಕುಪತ್ರಗಳು ಸಿದ್ಧಗೊಂಡಿದ್ದು, ಭಾನುವಾರದಂದೂ ಕೂಡ ಆಸ್ತಿಗಳ ನೊಂದಣಿ ಮತ್ತು ಹಕ್ಕುಪತ್ರ ತಯಾರಿಸುವ ಕಾರ್ಯ ನಡೆದಿದೆ. ಇದರನ್ವಯ, ಜಿಲ್ಲೆಯಲ್ಲಿ ಈ ಕಾರ್ಯ ಭರದಿಂದ ಸಾಗಿದೆ. ಭಾನುವಾರದಂದೂ ಕೂಡ ಜಿಲ್ಲೆಯ ಉಪನೊಂದಣಾಧಿಕಾರಿಗಳ ಕಚೇರಿ, ತಹಸಿಲ್ದಾರರ ಕಚೇರಿ ಹಾಗೂ ಗ್ರಾಮ ಪಂಚಾಯತಿಗಳು ಕಾರ್ಯ ನಿರ್ವಹಿಸಿದ್ದು, ರಾಜ್ಯದಲ್ಲಿಯೇ ಹೆಚ್ಚು ಹಕ್ಕುಪತ್ರ, ನೊಂದಣಿ ಹಾಗೂ ಇ–ಸ್ವತ್ತು ತಯಾರಿಕೆಯಲ್ಲಿ ಜಿಲ್ಲೆ ಮುಂಚೂಣಿಯಲ್ಲಿದೆ.



ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಭಾನುವಾರದಂದು ಜಿಲ್ಲೆಯ ವಿವಿಧ ತಹಸಿಲ್ದಾರರ ಕಚೇರಿ, ಉಪನೊಂದಣಾಧಿಕಾರಿಗಳ ಕಚೇರಿಗಳಿಗೆ ಖುದ್ದು ಭೇಟಿ ನೀಡಿ, ಆಸ್ತಿ ನೋಂದಣಿ, ಹಕ್ಕುಪತ್ರ, ಇ–ಸ್ವತ್ತುಗಳ ತಯಾರಿಕೆ ಕಾರ್ಯದ ಪ್ರಗತಿ ಕುರಿತಂತೆ ಪರಿಶೀಲಿಸಿ, ಸಿಬ್ಬಂದಿಗಳಿಗೆಸೂಕ್ತಸಲಹೆ,ಸೂಚನೆಗಳನ್ನು ನೀಡಿದರು.

ನಿಗದಿತ ಅವಧಿಯೊಳಗೆ ಜಿಲ್ಲೆಯ ಎಲ್ಲ 299ಕಂದಾಯಗ್ರಾಮಗಳಫಲಾನುಭವಿಗಳ ಹಕ್ಕುಪತ್ರ, ಇ–ಸ್ವತ್ತುಗಳನ್ನು ಸಿದ್ಧಪಡಿಸಿ, ಮೇ. 20 ರಂದು ವಿಜಯನಗರ ಜಿಲ್ಲೆ, ಹೊಸಪೇಟೆಯಲ್ಲಿ ಜರುಗುವ ಸರ್ಕಾರದ 2 ವರ್ಷಗಳ ಸಾಧನಾ ಸಮಾವೇಶದಲ್ಲಿ ಜಿಲ್ಲೆಯ ಎಲ್ಲ ಅರ್ಹ ಫಲಾನುಭವಿಗಳಿಗೆ ಆಸ್ತಿ ದಾಖಲೆಗಳನ್ನು ವಿತರಿಸಿ, ಸರ್ಕಾರದ ಆಶಯಕ್ಕೆ ಜಿಲ್ಲಾಡಳಿತ ಕೈಜೋಡಿಸಲಿದೆ ಎನ್ನುತ್ತಾರೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು.

## ಜಿಲ್ಲೆಯಲ್ಲಿ ಸುಸೂತ್ರವಾಗಿ ಜರುಗಿದ ನೀಟ್ ಪರೀಕ್ಷೆ

» ಚಿತ್ರದುರ್ಗ

ವೈದ್ಯಕೀಯ, ದಂತ ವೈದ್ಯಕೀಯ ಸೇರಿದಂತೆ ವೈದ್ಯಕೀಯ ಪದವಿ ಕೋರ್ಸ್‌ಗಳ ಪ್ರವೇಶಕ್ಕಾಗಿ ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ ವತಿಯಿಂದ ಭಾನುವಾರದಂದು ಚಿತ್ರದುರ್ಗದಲ್ಲಿ ಜರುಗಿದ ನೀಟ್ ಪರೀಕ್ಷೆ ಸುಗಮವಾಗಿ ಜರುಗಿದ್ದು, ಒಟ್ಟು 141 ವಿದ್ಯಾರ್ಥಿಗಳು ಗೈರಾಗಿದ್ದಾರೆ.

ನೀಟ್ ಪರೀಕ್ಷೆಗಾಗಿ ಜಿಲ್ಲೆಗೆ ಒಟ್ಟು 3019 ವಿದ್ಯಾರ್ಥಿಗಳನ್ನು ಹಂಚಿಕೆ ಮಾಡಲಾಗಿತ್ತು. ಇದಕ್ಕಾಗಿ ಒಟ್ಟು 06 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿತ್ತು. ಭಾನುವಾರದಂದು ಮಧ್ಯಾಹ್ನ 02 ರಿಂದ ಸಂಜೆ 05 ರವರೆಗೆ ಜರುಗಿದ ನೀಟ್ ಪರೀಕ್ಷೆ ಸುಗಮವಾಗಿ ಹಾಗೂ ಯಾವುದೇ ಗೊಂದಲಗಳಿಲ್ಲದ ರೀತಿ ಅಚ್ಚುಕಟ್ಟಾಗಿ ಜರುಗಿದ್ದು, 3019 ವಿದ್ಯಾರ್ಥಿಗಳ ಪೈಕಿ 2878 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ, 141 ವಿದ್ಯಾರ್ಥಿಗಳು ಪರೀಕ್ಷೆಗೆ ಗೈರು ಹಾಜರಾಗಿದ್ದಾರೆ. ಜಿಲ್ಲೆಯಲ್ಲಿ ಭಾನುವಾರ ಜರುಗಿದ ನೀಟ್ ಪರೀಕ್ಷೆ ಕಾರ್ಯಗಳ ಕುರಿತಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಎಲ್ಲ 06 ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ, ಪರೀಕ್ಷಾ ಪ್ರಕ್ರಿಯೆಗಳ ಬಗ್ಗೆ ಪರಿಶೀಲನೆ ನಡೆಸಿದರು. ನೀಟ್ ಪರೀಕ್ಷೆಯನ್ನು ಸುಗಮವಾಗಿ ನಡೆಸಲು ಅನುವಾಗುವಂತೆ ಪರೀಕ್ಷಾ ಕೇಂದ್ರದ ಸುತ್ತ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ, ಪೊಲೀಸ್ ಬಂದೋಬಸ್ತ್ ಕಾರ್ಯ ಕೈಗೊಳ್ಳಲಾಗಿತ್ತು.




## ಬೈಕ್‌ನ ಬ್ಯಾಗ್‌ನಲ್ಲಿದ್ದ ಹಣ ಕೈಚೀಲ ಹೊತ್ತು ಪರಾರಿಯಾಗುತ್ತಿದ್ದ ಬಾಲಕನ್ನು ಹಿಡಿದು ಹಣ ವಶ.

» ಚಳ್ಳಕೆರೆ

ನಗರದ ಚಿತ್ರದುರ್ಗ ರಸ್ತೆಯಲ್ಲಿರುವ ಕೆನರಾ ಬ್ಯಾಂಕ್‌ನಲ್ಲಿ ಶನಿವಾರ ಮಧ್ಯಾಹ್ನ 11ರ ಸಮಯದಲ್ಲಿ ಹಾಲಿಗೊಂಡನಹಳ್ಳಿಯ ಇದ್ದಿಲು ವ್ಯಾಪಾರ ತಿಪ್ಪೇಸ್ವಾಮಿ 2ಲಕ್ಷ ಹಣವನ್ನು ಪಡೆದು ಕೈಚೀಲದಲ್ಲಿ ಇಟ್ಟು ಅದನ್ನು ಬೈಕ್ ಹಿಂಭಾಗದ ಬಾಕ್ಸ್‌ನಲ್ಲಿ ಇಟ್ಟಿದ್ದಾನೆ. ಕೆಲವು ನಿಮಿಷಗಳ ನಂತರ ಬೈಕ್ ವಾಲಾಡಿದ್ದು ಕೂಡಲೇ ತಿಪ್ಪೇಸ್ವಾಮಿ ತಿರುಗಿನೋಡಿದಾಗ ಬಾಲಕನೊಬ್ಬ ಕೈಚೀಲದಲ್ಲಿದ್ದ ಹಣವನ್ನು ಹಿಡಿದು ಓಡುತ್ತಿರುವುದು ನೋಡಿ ಕಳ್ಳ ಎಂದು ಕೂಗಿಕೊಂಡಿದ್ದಾನೆ.



## ಪ್ರಮುಖ ಸುದ್ದಿ

### ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿಕೆ

# ಛಲ ಬಿಡದ ಪ್ರಯತ್ನಕ್ಕೆ ಭಗೀರಥರು ಪ್ರೇರಣೆ

» ಚಿತ್ರದುರ್ಗ

ಜೀವನದಲ್ಲಿ ಎಂತಹದು ಕಷ್ಟ ಎದುರಾದರು ಛಲ ಬಿಡದೆ, ಸತತ ಪ್ರಯತ್ನದಿಂದ ಸಾಧನೆ ಮಾಡುವುದಕ್ಕೆ ಮಹರ್ಷಿ ಭಗೀರಥರು ಪ್ರೇರಣೆಯಾಗಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರ ಸಭೆ ಸಹಯೋಗದಲ್ಲಿ, ಭಾನುವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾದ ಮಹರ್ಷಿ ಭಗೀರಥ ಜಯಂತಿ ಕಾರ್ಯಕ್ರಮದಲ್ಲಿ ಭಗೀರಥರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಪ್ರಯತ್ನ ಹಾಗೂ ಸಾಧನೆಯ ದ್ಯೋತಕವಾದ ಭಗೀರಥ ಮಹರ್ಷಿಯ ಆದರ್ಶಗಳನ್ನು ಎಲ್ಲರೂ ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು. ಸಮಾಜದಲ್ಲಿ ಇಂದಿಗೂ ಕಠಿಣ ಪರಿಶ್ರಮಕ್ಕೆ ಭಗೀರಥ ಯತ್ನ ಎಂದು ಕರೆಯಲಾಗುತ್ತದೆ. ಭಗೀರಥರು ಎಂದರೆ ಪ್ರಯತ್ನದ ಸಾಧನೆಯ ದ್ಯೋತಕವಾಗಿದ್ದು, ಸಾಕ್ಷತ್ ಗಂಗೆಯನ್ನು ಧರೆಗಿಳಿಸಿದ ಮಹಾಪುರುಷರು ಎಂದು ಬಣ್ಣಿಸಿದರು. ಉಪ್ಪಾರ ಸಮಾಜದವರು ಶ್ರಮಜೀವಿಗಳಾಗಿದ್ದು, ಸಂಘಟನೆ ಜತೆಗೆ ಶೈಕ್ಷಣಿಕ ಕ್ಷೇತ್ರದಲ್ಲೂ ಸಾಕಷ್ಟು ಸಾಧನೆ ಮಾಡುತ್ತಿದ್ದಾರೆ. ಹಲವು ಜನರು ಸರ್ಕಾರ ಉನ್ನತ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ಸರ್ಕಾರ ಉಪ್ಪಾರ ಸಮಾಜವನ್ನು ಪ್ರವರ್ಗ–1 ಅಡಿ ಪರಿಗಣಿಸಿ ಸಾಕಷ್ಟು ಸಲವತ್ತುಗಳನ್ನು ನೀಡುತ್ತಿದೆ. ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ಕಲ್ಪಿಸಿದೆ. ಎಲ್ಲರೂ ಮಕ್ಕಳ ಶೈಕ್ಷಣಿಕ ಸಾಧನೆಗೆ ಇಂಬು ನೀಡಿದರೆ, ಮಕ್ಕಳು ಸಹ ಭಗೀರಥರಂತೆ ಸಾಧನೆ ಮಾಡುತ್ತಾರೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.



ನಿವೃತ್ತ ಡಿವೈಸ್ಪಿ ನಾಗರಾಜ್ ಮಹರ್ಷಿ ಭಗೀರಥರ ಕುರಿತು ಉಪನ್ಯಾಸ ನೀಡಿದರು. ನಿವೃತ್ತ ಶಿಕ್ಷಕ ವೆಂಕಟೇಶ್ ಪ್ರಾರ್ಥಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ಎಂ.ಗುರುನಾಥ್ ಸ್ವಾಗತಿಸಿದರು. ರಂಗನಿರ್ದೇಶಕ ಕೆ.ಪಿ.ಎಂ. ಗಣೇಶಯ್ಯ ಕಾರ್ಯಕ್ರಮ ನಿರೂಪಿಸಿ, ನಾಡಗೀತೆ ಹಾಗೂ ವಚನ ಗಾಯನ ಪ್ರಸ್ತುತಪಡಿಸಿದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಮಹೆಬೂಬ್ ಜಿಲಾನಿ ಖುರೇಷಿ, ಭಗೀರಥ ಜಿಲ್ಲಾ ಉಪ್ಪಾರ ಸಮಾಜದ ಅಧ್ಯಕ್ಷ ಎನ್.ವೀರೇಶ್, ಪ್ರಧಾನ ಕಾರ್ಯದರ್ಶಿ ಎಲ್.ಮಹೇಶ್, ಖಜಾಂಚಿ ಹೆಚ್.ಅಜ್ಜಪ್ಪ, ಸೇರಿದಂತೆ ಆರ್.ಮೂರ್ತಿ, ದೇವರಾಜ್, ಅಜ್ಜಯ್ಯ, ಎನ್.ತಿಪ್ಪೇಸ್ವಾಮಿ, ಈಶ್ವರ, ವಕೀಲರಾದ ಜಗದೀಶ್, ಜಗನ್ನಾಥ್ ಸೇರಿದಂತೆ ಉಪ್ಪಾರ ಸಮಾಜದ ಇತರೆ ಮುಖಂಡರು ಇದ್ದರು.

## ಫಾಸ್ಟ್ ನ್ಯೂಸ್

### ಬೈಕ್‌ನ ಬ್ಯಾಗ್‌ನಲ್ಲಿದ್ದ ಹಣ ಕೈಚೀಲ ಹೊತ್ತು ಪರಾರಿಯಾಗುತ್ತಿದ್ದ ಬಾಲಕನ್ನು ಹಿಡಿದು ಹಣ ವಶ

» ಮೊದಲ ಪುಟದಿಂದ

ತಿಪ್ಪೇಸ್ವಾಮಿಯ ಕೂಗಾಟ ಕೇಳಿದ ಸುತ್ತಮುತ್ತಲ ಜನ ಹಣ ಕೈಚೀಲದೊಂದಿಗೆ ಓಡುತ್ತಿದ್ದ ಬಾಲಕನನ್ನು ಹಿಡಿಯಲು ಯತ್ನಿಸಿದ್ದಾರೆ. ಅಷ್ಟರಲ್ಲೇ ಎದುರಿಗೆ ಬಂದ ಮಂಜುನಾಥ ಎಂಬ ಯುವಕ ಹುಡುಗನನ್ನು ಹಿಡಿದುಕೊಂಡಿದ್ದಾನೆ. ನಂತರ ಆತನನ್ನು ಪೊಲೀಸ್ ಠಾಣೆಗೆ ಕರೆತಂದಿದ್ದಾರೆ. ಬಾಲಕನ ವಿವರಗಳು ತಿಳಿಯಬೇಕಿದೆ ಸೊಲ್ಲಾಪುರದ ಮೂಲದವರನು ಎನ್ನಲಾಗಿದೆ. ಬಾಲಕನನ್ನು ಹಿಡಿದು ಹಣವನ್ನು ವಾಪಾಸ್ ಪಡೆಯಲು ಸಹಕರಿಸಿ ಮಂಜುನಾಥನಿಗೆ ಕೃತಜ್ಞತೆ ಸಲ್ಲಿಸಿದ್ದಲ್ಲದೆ, ಇಂತಹ ಸಮಯದಲ್ಲಿ ಸಾರ್ವಜನಿಕರು ಸಹಾಯಕ್ಕೆ ದಾವಿಸಬೇಕೆಂದಿದ್ದಾನೆ. ಚಳ್ಳಕೆರೆ ಪೊಲೀಸರು ವಿಚಾರಣೆ ಮುಂದುವರೆಸಿದ್ದಾರೆ.

### ಗ್ಯಾರಂಟಿ ಅನುಷ್ಟಾನ ಪ್ರಾಧಿಕಾರ ಅಧ್ಯಕ್ಷರಾದ ಹೆಚ್.ಎಂ ರೇವಣ್ಣ ಪ್ರವಾಸ

» ದಾವಣಗೆರೆ

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ ರೇವಣ್ಣ ಇವರು ಮೇ-2025ರ ಮಾಹೆಯ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಮೇ.5 ರಂದು ಬೆಳಿಗ್ಗೆ ಮಧ್ಯಾಹ್ನ 3 ಗಂಟೆಗೆ ದಾವಣಗೆರೆಗೆ ಆಗಮಿಸುವರು. ಮ.3.30ಕ್ಕೆ ದಾವಣಗೆರೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ನೂತನ ಕಚೇರಿಯ ಉದ್ಘಾಟನೆ ನೆರವೇರಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಬೇಸಿಗೆ ಶಿಬಿರ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ದಾವಣಗೆರೆ ನಗರದ ಜೆ.ಹೆಚ್.ಪಟೇಲ್ ಬಡಾವಣೆಯಲ್ಲಿರುವ ಜಿಲ್ಲಾ ಬಾಲಭವನದಲ್ಲಿ ಮೇ.6 ರಿಂದ 20 ರವರೆಗೆ ಬೇಸಿಗೆ ಶಿಬಿರವನ್ನು ಆಯೋಜಿಸಲಾಗಿದೆ. ಶಿಬಿರದಲ್ಲಿ ಚಿತ್ರಕಲೆ, ಕರಕುಶಲ, ಜೇಡಿಮಣ್ಣಿನ ಕಲೆ, ಸಂಗೀತ, ನೃತ್ಯ, ಯೋಗ, ಕರಾಟೆ ಗ್ರಾಮೀಣ ಕ್ರೀಡೆಗಳು ಹಾಗೂ ಇನ್ನಿತರ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ. 6 ರಿಂದ 16 ವರ್ಷ ವಯಸ್ಸಿನ ಮಕ್ಕಳು ಭಾಗವಹಿಸಬಹುದು. ಮೇ.6 ರೊಳಗೆ ಅರ್ಜಿಗಳನ್ನು ಪಡೆದು ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಾರ್ಯಕ್ರಮ ಸಂಯೋಜಕರು ಮೊ.ಸಂ:9964496242, ಮತ್ತು 9632887189 ನ್ನು ಸಂಪರ್ಕಿಸಲು ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

### ಆಯುಷ್ ಆಸ್ಪತ್ರೆ ಮತ್ತು ಜಿಲ್ಲಾ ಆಯುಷ್ ಕಚೇರಿ ನೂತನ ಕಟ್ಟಡ ಉದ್ಘಾಟನಾ ಕಾರ್ಯಕ್ರಮ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಮೇ.5 ರಂದು ಮಧ್ಯಾಹ್ನ 3 ಗಂಟೆಗೆ ನಗರದ ನಾಗಮ್ಮ ಕೇಶವಮೂರ್ತಿ ಬಡಾವಣೆ, ಪೋದಾರ್ ಸ್ಕೂಲ್ ಹತ್ತಿರ, ಇಲ್ಲಿ 50 ಹಾಸಿಗೆಗಳ ಸಂಯುಕ್ತ ಆಯುಷ್ ಆಸ್ಪತ್ರೆ ಮತ್ತು ಜಿಲ್ಲಾ ಆಯುಷ್ ಕಚೇರಿ ನೂತನ ಕಟ್ಟಡಗಳ ಉದ್ಘಾಟನಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಉದ್ಘಾಟಿಸುವರು. ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡುರಾವ್ ಉಪಸ್ಥಿತರಾಗಿರುವರು. ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಬ್ರಾಹ್ಮಣ ಅಭಿವೃದ್ಧಿ ನಿಗಮದ ಅಧ್ಯಕ್ಷ ಅಸಗೋಡು ಜಯಸಿಂಹ, ಬಂಜಾರ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವನಾಯ್ಕ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಾಮನೂರು ಟಿ ಬಸವರಾಜ್, ಶಿರಮಗೊಂಡನಹಳ್ಳಿಯ ಗ್ರಾ.ಪಂ ಅಧ್ಯಕ್ಷರಾದ ಪ್ರಸನ್ನ.ಡಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ ಬಿ. ಇಟ್ನಾಳ್. ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಯೋಗೇಂದ್ರಕುಮಾರ್. ಕಾರ್ಯಕ್ರಮದಲ್ಲಿ ಭಾಗವಹಿಸುವರು. ಆಯುಷ್ ಇಲಾಖೆಯ ಆಯುಕ್ತರಾದ ವಿಪಿನ್‌ಸಿಂಗ್ ವಿಶೇಷ ಆಹ್ವಾನಿತರಾಗಿರುವರು.

# 10ಕ್ಕೆ ಸರಳ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ



» ಚಿತ್ರದುರ್ಗ

ಸರ್ಕಾರದ ನಿರ್ದೇಶನದಂತೆ ಮೇ.10 ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸರಳವಾಗಿ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಆಚರಿಸುವುದಾಗಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಈ ಕುರಿತು ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಸಮಾಜದ ಮುಖಂಡರು ಮೇ.10 ನಂತರ ಸಮಾಜದ ವತಿಯಿಂದ ಅದ್ದೂರಿಯಾಗಿ ಹೇಮರೆಡ್ಡಿ ಮಲ್ಲಮ್ಮನ ಜಯಂತಿ ಆಚರಣೆ ಮಾಡುವುದಾಗಿ ತಿಳಿಸಿದ್ದೀರಿ. ಆದರೆ ಸರ್ಕಾರ ಮೇ.10 ರಂದು ಜಯಂತಿ ಆಚರಣೆಗೆ ದಿನಾಂಕ ನಿಗದಿ ಪಡಿಸಿದ ಕಾರಣ ಅಂದು ಸರಳವಾಗಿ ಜಯಂತಿ ಆಚರಿಸಿ, ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗುವುದು. ಸಮಾಜದಿಂದ ಆಚರಿಸುವ ಜಯಂತಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಳಿಕೆ ಅನುದಾನದ ಸಹಾಯ ಹಾಗೂ ಕಲಾತಂಡಗಳನ್ನು ಒದಗಿಸುವುದಾಗಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು. ಮೇ.20ರ ಒಳಗಾಗಿ ಸಮಾಜದ ವತಿಯಿಂದ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಆಚರಿಸಲಾಗುವುದು ಈ ವೇಳೆ 2024-25ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಗುವುದು ಎಂದು ಅಧ್ಯಕ್ಷ ಚಿದಾನಂದಪ್ಪ ತಿಳಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ಎಂ. ಗುರುನಾಥ್, ಹೇಮರೆಡ್ಡಿ ಮಲ್ಲಮ್ಮ ಸಮಾಜದ ಕಾರ್ಯದರ್ಶಿ ಶಿವಾನಂದಪ್ಪ, ನಗರಸಭೆ ಮಾಜಿ ಅಧ್ಯಕ್ಷೆ ಸುನಿತಾ ಮಲ್ಲಿಕಾರ್ಜುನ್, ಮುಖಂಡರಾದ ಚಂದ್ರಶೇಖರ್, ಮಹೇಶ್, ಶಶಿಧರ್, ಇಂದ್ರಣ್ಣ.ಎಸ್.ಟಿ, ಕೆ.ಎನ್.ವೀರಭದ್ರಪ್ಪ, ಮಹಾಂತೇಶ್, ಎಂ.ಪಿ.ಮಲ್ಲಿಕಾರ್ಜುನ ರೆಡ್ಡಿ, ನಾಗರಾಜ.ಕೆ.ಎಂ, ಜಿ.ಆರ್. ಮಹಾಂತೇಶಪ್ಪ, ಟಿ.ಚನ್ನಯ್ಯರೆಡ್ಡಿ, ಜಿಲ್ಲಾ ವೇಮನ ಸಮಾಜದ ಮುಖಂಡರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಮೇ.12 ರಂದು ಭಗವಾನ್ ಬುದ್ಧ ಜಯಂತಿ

**ಚಿತ್ರದುರ್ಗ:** ಭಗವಾನ್ ಬುದ್ಧರ ಸಂದೇಶ ಸಾರುವ ನಿಟ್ಟಿನಲ್ಲಿ ಮೇ.12 ರಂದು ಬುದ್ಧ ಜಯಂತಿ ಆಚರಿಸುವುದಾಗಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು. ಈ ಕುರಿತು ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬುದ್ಧನ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ. ಸಮ ಸಮಾಜದ ನಿರ್ಮಾಣಕ್ಕೆ ಬುದ್ಧ ತತ್ವಗಳು ಆಧಾರವಾಗಿವೆ. ಇವುಗಳನ್ನು ಜನ ಮಾನಸದಲ್ಲಿ ಪಸರಿಸುವ ಉದ್ದೇಶದಿಂದ ರಾಜ್ಯ ಸರ್ಕಾರದ ವತಿಯಿಂದಲೇ ಭಗವಾನ್ ಬುದ್ಧ ಜಯಂತಿ ಆಚರಣೆಗೆ ತೀರ್ಮಾನಿಸಲಾಗಿದೆ ಎಂದು ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.

ಬುದ್ಧ ನಗರದಲ್ಲಿ ಕಾರ್ಯಕ್ರಮ ಆಯೋಜನೆ: ಮೇ12 ಬೆಳಗ್ಗ 11 ಗಂಟೆಗೆ ನಗರದ ಬುದ್ಧ ನಗರದ ಒನಕೆ ಓಬವ್ವ ಕ್ರೀಡಾಂಗಣದ ಎದುರಿನ ಭಗವಾನ್ ಬುದ್ಧನ ಪುತ್ಥಳಿಯ ಬಳಿ ಜಯಂತಿ ಕಾರ್ಯಕ್ರಮ ಆಯೋಜಿಸಲಾಗುದು. ನಗರ ಸಭೆ ವತಿಯಿಂದ ವೇದಿಕೆ ನಿರ್ಮಾಣ ಮಾಡಿ, ಶಾಮಿಯಾನ ಹಾಕಬೇಕು. ಬುದ್ಧನ ಕುರಿತು ಸಿ.ಕೆ.ಮಹೇಶ್ವರಪ್ಪ ನವರು ಉಪನ್ಯಾಸ ನೀಡಲಿದ್ದಾರೆ. ಸಂಗೀತ ಕಾರ್ಯಕ್ರಮ ಸಹ ಯೋಜಿಸಲಾಗುವುದು. ತಹಶೀಲ್ದಾರ್ ಶಿಷ್ಟಾಚಾರ ಅನುಸಾರ ಜನಪ್ರತಿನಿಧಿಗಳನ್ನು ಜಯಂತಿ ಕಾರ್ಯಕ್ರಮ ಆಹ್ವಾನಿಸಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯ ನಿರ್ದೇಶಕರು ಎಲ್ಲಾ ಧರ್ಮಗಳ ಮುಖಂಡರು, ವಿವಿಧ ಪ್ರಗತಿಪರ ಸಂಘ ಸಂಸ್ಥೆಗಳಿಗೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ತಿಳಿಸಬೇಕು ಎಂದು ಬಿ.ಟಿ.ಕುಮಾರಸ್ವಾಮಿ ಹೇಳಿದರು. ಸಭೆಯುಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ಎಂ.ಗುರುನಾಥ್, ತಹಶೀಲ್ದಾರ್ ಗೋವಿಂದರಾಜು, ನವಯಾನ ಬೌದ್ಧ ಸಂಘದ ಕುಮಾರ್ ಜೆ.ಜೆ. ಹಟ್ಟಿ, ಗೌತಮ ಬುದ್ಧ ಪ್ರತಿಷ್ಠಾನದ ಬಿ.ಪಿ.ತಿಪ್ಪೇಸ್ವಾಮಿ, ನವಯಾನ ಬೌದ್ಧ ಪಂಥದ ಡಿ.ದುರ್ಗೇಶ್, ಸಾಮಾಜಿಕ ಸಂಘರ್ಷ ಸಮಿತಿಯ ಆರ್.ರಾಮಲಿಂಗಪ್ಪ, ಕೆ.ಕುಮಾರ್, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಬಿ.ಪಿ.ಪ್ರಕಾಶ ಮೂರ್ತಿ, ದಲಿತ ಸಂಘರ್ಷ ಸಮಿತಿಯ ಎಸ್.ಮಲ್ಲಿಕಾರ್ಜುನ್, ವೈ.ರಾಜಣ್ಣ ತುರವನೂರು, ಮಾದಿಗ ಹೋರಾಟ ಸಮಿತಿ ಸದಸ್ಯ ಹುಲ್ಲೂರು ಕುಮಾರಸ್ವಾಮಿ ಇದ್ದರು.

## ಶಿವಮೊಗ್ಗ ಹಾಲುಒಕ್ಕೂಟ ವಿಸ್ತರಣಾಧಿಕಾರಿ ಕೆ.ಕೃಷ್ಣಪ್ಪ ವಯೋನಿವೃತ್ತಿ: ಒಕ್ಕೂಟದಿಂದ ಸನ್ಮಾನಿಸಿ ಬೀಳ್ಕೊಡಿಗೆ

» ಚಳ್ಳಕೆರೆ



ಶಿವಮೊಗ್ಗಹಾಲು ಒಕ್ಕೂಟದ ವಿವಿಧ ಕೇಂದ್ರಗಳಲ್ಲಿ ವಿಸ್ತಾರಣಾಧಿಕಾರಿಯಾಗಿ ಕಾರ್ಯನಿರ್ವಹಿಸಿ ಹಾಲುಒಕ್ಕೂಟದ ಅಭಿವೃದ್ದಿಗೆ ಕಾರಣಕರ್ತರಾದ ವಿಸ್ತಾರಣಾಧಿಕಾರಿ ಕೆ.ಕೃಷ್ಣಪ್ಪರವರು ವಯೋನಿವೃತ್ತಿಹೊಂದಿದ ಹಿನ್ನಲೆಯಲ್ಲಿ ಒಕ್ಕೂಟದಿಂದ ಸನ್ಮಾನಿಸಿ ಬೀಳ್ಕೊಡಲಾಯಿತು.

ನಗರದ ಬೆಂಗಳೂರು ರಸ್ತೆಯ ಹಾಲುಒಕ್ಕೂಟದ ವಿಭಾಗೀಯ ಉಪಕಚೇರಿ ಕುರಿಯನ್ ಸಭಾಂಗಣದಲ್ಲಿ ಏಪ್ರಿಲ್ ತಿಂಗಳ ಹಾಲುಉತ್ಪಾದಕರ ಸಹಕಾರಿ ಸಂಘದ ಕಾರ್ಯದರ್ಶಿಗಳ ಮಾಸಿಕ ಪ್ರಗತಿಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಬಿ.ಸಿ.ಸಂಜೀವಮೂರ್ತಿ, ನಿವೃತ್ತಿಹೊಂದಿದ ಕೆ.ಕೃಷ್ಣಪ್ಪನವರ ಕಾರ್ಯಚಟುವಟಿಕೆಗಳ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಕೆ.ಕೃಷ್ಣಪ್ಪನವರು ಸುಮಾರು 30ಕ್ಕೂ ಹೆಚ್ಚು ಕಾಲ ಹಾಲು ಒಕ್ಕೂಟದಲ್ಲಿ ಕಾರ್ಯನಿರ್ವಹಿಸಿದ್ದಾರೆ. ಶಿವಮೊಗ್ಗ ಹಾಲುಒಕ್ಕೂಟದ ಕಾರ್ಯಚಟುವಟಿಕೆಗಳಲ್ಲಿ ಸಕ್ರಿಯಾವಾಗಿ ಭಾಗವಹಿಸಿದ್ದಾರೆ, ಹಿರಿಯ ಅಧಿಕಾರಿಯಾಗಿ ಎಲ್ಲರಿಗೂ ಸಕಾಲದಲ್ಲಿ ಸಲಹೆ, ಸೂಚನೆ ನೀಡುವ ಮೂಲಕ ಹಾಲು ಒಕ್ಕೂಟದ ಪ್ರಗತಿಗೆ ಪ್ರೇರಕ ಶಕ್ತಿಯಾಗಿ ಕಾರ್ಯನಿರ್ವಹಿಸಿದ್ದರು. ವಿಸ್ತರಣಾಧಿಕಾರಿಯಾಗಿ ಉತ್ತಮ ಕಾರ್ಯನಿರ್ವಹಿಸುವ ಮೂಲಕ ಎಲ್ಲರಿಗೂ ಮಾದರಿಯಾಗಿದ್ದಾರೆಂದರು.

ಅಭಿನಂದನೆಗಳನ್ನುಸ್ವೀಕರಿಸಿ ಮಾತನಾಡಿದ ಕೆ.ಕೃಷ್ಣಪ್ಪ, ಹಾಲುಒಕ್ಕೂಟದಲ್ಲಿ ಸುಧೀರ್ಘಕಾಲ ಸೇವೆ ಸಲ್ಲಿಸಲು ಅವಕಾಶಮಾಡಿಕೊಟ್ಟ ಅಧಿಕಾರಿಗಳಿಗೆ ಧನ್ಯವಾದ ತಿಳಿಸಿದರು. ಹಾಲುಒಕ್ಕೂಟ ಲಾಭದಾಯದತ್ತ ಮುನ್ನಡೆಯಲು ಎಲ್ಲರ ಪರಿಶ್ರಮ ಅಗತ್ಯ ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿ ಅರಿತು ಕಾರ್ಯನಿರ್ವಹಿಸಿದ್ದಲ್ಲಿ ಮಾತ್ರ ಯಶಸ್ಸು ಸಾಧ್ಯವೆಂದರು.

ವಿಭಾಗಾಧಿಕಾರಿ ಎಂ.ಪುಟ್ಟರಾಜು, ಕೃಷ್ಣಪ್ಪನವರ ಪತ್ನಿ ಜಯಮ್ಮ, ಮಾರ್ಗವಿಸ್ತರಣಾಧಿಕಾರಿ ಎಸ್.ನಯಾಜ್‌ಬೇಗ್, ಪಶುವೈದ್ಯಾಧಿಕಾರಿ ಡಾ.ನರೇಶ್, ಡಾ.ಸತ್ಯನಾರಾಯಣ, ನಿರಂಜನ್, ಸುರೇಶ್‌ಬಾಬು ಭಾಗವಹಿಸಿದ್ದರು.

## ಪರಶುರಾಮಪುರ ಪೊಲೀಸರ ಕಾರ್ಯಚರಣೆ: 2.40 ಲಕ್ಷ ಮೌಲ್ಯದ ಒಣಗಾಂಜಾ ವಶ



» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಪೊಲೀಸ್ ಠಾಣಾ ವ್ಯಾಪ್ತಿಯ ಪಗಡಲಬಂಡೆ ನರಸಿಂಹಪ್ಪ(31) ಎಂಬ ವ್ಯಕ್ತಿ ಅಕ್ರಮವಾಗಿ ನಾಗಪ್ಪನಹಳ್ಳಿ ಗೇಟ್ ಹಾಗೂ ಸುತ್ತಮುತ್ತಲ ಪ್ರದೇಶದಲ್ಲಿ ಮೋಟಾರ್‌ನಲ್ಲಿ ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ ಬಗ್ಗೆ ಮಾಹಿತಿ ಪಡೆದ ಪರಶುರಾಮಪರು ಪೊಳೀಸರು ಆರೋಪಿಯನ್ನು ಮಾಲು ಸಹಿತ ಬಂಧಿಸಿ ನ್ಯಾಯಾಂಗ ವಶಕ್ಕೆ ನೀಡಿದ್ದಾರೆ.

ಡಿವೈಎಸ್ಪಿ ಟಿ.ಬಿ.ರಾಜಣ್ಣ, ತಳಕು ವೃತ್ತ ನಿರೀಕ್ಷಕ ಹನುಮಂತಪ್ಪ ಎಂ.ಶಿರೆಹಳ್ಳಿ ಪರಶುರಾಮಪುರ ಪಿಎಸ್‌ಐ ಎಚ್.ಮಾರುತಿ, ಎಎಸ್‌ಐ ನಾಗರಾಜು, ಮುಖ್ಯಪೇದೆಗಳಾದ ಎಚ್.ಏಕಾಂತರೆಡ್ಡಿ, ವೀರೇಶ್, ಬಸವರೆಡ್ಡಿ ಪೇದೆಗಳಾದ ಮಂಜುನಾಥಮುಡುಕೆ, ಶಿವಣ್ಣನಾಯ್ಕ ಮುಂತಾದವರು ಆರೋಪಿಯನ್ನು ಮಾಲು ಹಾಗೂ ಬೈಕ್‌ನ್ನು ವಶಪಡಿಸಿಕೊಂಡು ನ್ಯಾಯಾಂಗ ವಶಕ್ಕೆ ನೀಡಿರುತ್ತಾರೆ. ಸುಮಾರು 2.40 ಲಕ್ಷ ಮೌಲ್ಯದ 4.95 ಕೆ.ಜಿ.ಒಣಗಾಂಜಾವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಜಿಲ್ಲಾ ರಕ್ಷಣಾಧಿಕಾರಿ ರಂಜಿತ್‌ಕುಮಾರ್‌ಬಂಡಾರು, ಹೆಚ್ಚುವರಿ ರಕ್ಷಣಾಧಿಕಾರಿ ಕುಮಾರಸ್ವಾಮಿ ಪತ್ತೆಕಾರ್ಯಕ್ಕೆ ಪ್ರಶಂಸೆ ವ್ಯಕ್ತಪಡಿಸಿದ್ಧಾರೆ.

## ಬೇಸಿಗೆ ಶಿಬಿರಗಳು ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಸಹಕಾರಿ

» ಚಳ್ಳಕೆರೆ



ನಗರದ ಬೆಂಗಳೂರು ರಸ್ತೆಯಲ್ಲಿರುವ ಮಾಕಂಸ್ ರೋಟರಿ ಶಾಲೆಯಲ್ಲಿ ಗ್ಲೋಬಲ್ ಥಿಯೇಟರ್ ಡ್ರಾಮ ಚಾಂಪಿಯನ್ಸ್ ಬೇಸಿಗೆ ಶಿಬಿರವನ್ನು ಆಯೋಜಿಸಿದ್ದು ಶಿಬಿರದ ಮುಕ್ತಾಯ ಸಮಾರಂಭ ನಡೆಯಿತು.

ಮಾಕಂಸ್ ರೋಟರಿ ವಿದ್ಯಾಸಂಸ್ಥೆ ಕಾರ್ಯದರ್ಶಿ ಡಾ.ಕೆ.ಎಂ.ಜಯಕುಮಾರ್ ಮಾತನಾಡಿ, ಬೇಸಿಗೆ ಶಿಬಿರಗಳು ಮಕ್ಕಳ ಕ್ರಿಯಾಶೀಲ ಬೆಳವಣಿಗೆಗೆ ಸಹಕಾರಿಯಾಗುತ್ತವೆ. ಇಂತಹ ಶಿಬಿರಗಳು ಹೆಚ್ಚು ನಡೆಯಬೇಕು ಹಾಗೂ ಮಕ್ಕಳೂ ಸಹ ಶಿಬಿರದಲ್ಲಿ ಭಾಗವಹಿಸಬೇಕು. ಶಿಬಿರದಲ್ಲಿ ಗ್ರಾಮೀಣ ಭಾಗದ ಬದುಕಿನ ಜಾನಪದ ಕಲೆಯನ್ನು ಬಿಂಬಿಸುವ ನಾಟಕ ಪ್ರದರ್ಶನ ಏರ್ಪಡಿಸಿದ್ದು ಸಂತಸ ತಂದಿದೆ ಎಂದರು. ಗ್ಲೋಬಲ್ ಥಿಯೇಟರ್ ಡ್ರಾಮದ ನಿರ್ದೇಶಕ ಯುವರಾಜ್‌ನಾಯ್ಕ ಮಾತನಾಡಿ, ಕಳೆದ 15ದಿನಗಳಿಂದ ಈ ಶಾಲೆಯಲ್ಲಿ ಶಿಬಿರ ಆಯೋಜಿಸಿ ಮಕ್ಕಳಿಗೆ ರಂಗಕಲೆಯ ಅಭಿರುಚಿಯ ಬಗ್ಗೆ ಮಾರ್ಗದರ್ಶನ ನೀಡಲಾಯಿತು. ಕೇವಲ 15ದಿನದ ಅವಧಿಯಲ್ಲಿ ಮಕ್ಕಳು ಉತ್ತಮ ನಾಟಕ ಪ್ರದರ್ಶಿಸಿದ್ದಾರೆ. ಪ್ರತಿವರ್ಷವೂ ಈ ಕಾರ್ಯಕ್ರಮ ಮುಂದುವರೆಸಲು ನಿರ್ಧರಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಾಟಕ ರಚನಕಾರ ರಂಗನಾಥನೀನಾಸಂ, ಸಂಗೀತ ನಿರ್ದೇಶಕ ಹೇಮಂತ, ಡಿ.ಜ್ಯೋತಿಗಿರೀಶ್, ಧೀಮಂತ್‌ರಾಮ್, ಯಶಸ್ವಿನಿ ಉಪಸ್ಥಿತರಿದ್ದರು.

### ಸಚಿವ ವಿ.ಸೋಮಣ್ಣ ಜಿಲ್ಲಾ ಪ್ರವಾಸ

» ದಾವಣಗೆರೆ

ರಾಜ್ಯ ರೈಲ್ವೆ ಮತ್ತು ಜಲ ಶಕ್ತಿ ಸರ್ಕಾರದ ಸಚಿವರಾದ ವಿ.ಸೋಮಣ್ಣ ಅವರು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಮೇ.7 ರಂದು ಮಧ್ಯಾಹ್ನ 1.30ಕ್ಕೆ ದಾವಣಗೆರೆ ಆಗಮಿಸುವರು. ನಂತರ ಮ. 2 ಗಂಟೆಗೆ ಸಮೃದ್ಧಿ, 1991, ಎಂ.ಸಿ.ಕಾಲೋನಿಯ ಎ ಬ್ಲಾಕ್, ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮ.3.30ಕ್ಕೆ ದಾವಣಗೆರೆ ರೈಲ್ವೆ ನಿಲ್ದಾಣದ ಪರಿಶೀಲನೆ ಮತ್ತು ಎಲ್.ಸಿ 199ಎ ಬದಲಿಗೆ ರೈಲ್ವೆ ಅಂಡರ್ ಬ್ರಿಡ್ಜ್ ಶಂಕುಸ್ಥಾಪನೆ ನೆರವೇರಿಸುವರು. ಸಂಜೆ 4.30ಕ್ಕೆ ದಾವಣಗೆರೆಯಿಂದ ಹೊರಟು ಹರಿಹರಕ್ಕೆ ತೆರಳುವರು. ನಂತರ 5 ಗಂಟೆಗೆ ಹರಿಹರದ ರೈಲ್ವೆ ನಿಲ್ದಾಣದಲ್ಲಿ ರೈಲು ನಿಲ್ದಾಣ ಮತ್ತು ಇತರೆ ರೈಲ್ವೆ ಕಾಮಗಾರಿಗಳ ಪರಿಶೀಲನೆ ನಡೆಸುವರು ಎಂದು ಪ್ರಕಟಣೆ ತಿಳಿಸಿದೆ.

## ಪ್ರಮುಖ ಸುದ್ದಿ

### ವ್ಯಾಪಾರಸ್ಥರು ಹಾಗೂ ರೈತ ಸಮುದಾಯಕ್ಕೆ ಆರ್ಥಿಕ ನೆರವು

# ಅಭಿವೃದ್ಧಿ ಪರ ಚಿಂತನೆಗೆ ಸುಕೋಬ್ಯಾಂಕ್ ಸಹಕಾರಿ: ಆರ್.ಪಾಲಯ್ಯ

» ಚಳ್ಳಕೆರೆ






ನಗರದ ಚಿತ್ರದುರ್ಗ ರಸ್ತೆಯಲ್ಲಿರುವ ಸುಕೋ ಸೌಹಾರ್ಧ ಸಹಕಾರಿ ಬ್ಯಾಂಕ್‌ನ 32ನೇ ಸಂಸ್ಥಾಪನಾ ದಿನಾಚರಣೆಯನ್ನು ಬ್ಯಾಂಕ್‌ನ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಶ್ರೀರಾಮ್ ಮೋಟಾರ್ಸ್‌ನ ಮಾಲೀಕ, ಬಿಜೆಪಿ ಯುವಮೋರ್ಚಾ ಜಿಲ್ಲಾಧ್ಯಕ್ಷ, ಸದಸ್ಯ ಆರ್.ಪಾಲಯ್ಯ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಸುಕೋ ಬ್ಯಾಂಕ್ ಚಳ್ಳಕೆರೆ ಸೇರಿದಂತೆ ರಾಜ್ಯ ಹಲವಾರು ಭಾಗಗಳಲ್ಲಿ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದೆ. ವಿಶೇಷವಾಗಿ ಉದ್ಯಮಿಗಳು, ವ್ಯಾಪಾರಸ್ಥರು, ಕೃಷಿಕರು ಹಾಗೂ ಬೀದಿಬದಿ ವ್ಯಾಪಾರಿಗಳಿಗೆ ಆರ್ಥಿಕ ನೆರವು ನೀಡುವ ಮೂಲಕ ವಾಣಿಜ್ಯ ಕ್ಷೇತ್ರದ ಅಭಿವೃದ್ದಿಗೆ ಶ್ರಮಿಸುತ್ತಿದೆ ಎಂದರು.

ಎಲ್ಲರನ್ನೂ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದ ಬ್ಯಾಂಕ್‌ನ ವ್ಯವಸ್ಥಾಪಕ ಎಸ್.ಶಿವಾನಂದ, ಪ್ರಸ್ತುತ ಸುಕೋ ಸೌಹಾರ್ಧ ಸಹಕಾರಿ ಬ್ಯಾಂಕ್‌ನ 32ನೇ ವರ್ಷದ ಸಂಸ್ಥಾಪನಾ ದಿನಾಚರಣೆಯನ್ನು ಇಂದು ನಾವೆಲ್ಲರೂ ಆಚರಿಸುತ್ತಿದ್ದೇವೆ. 32 ವರ್ಷಗಳ ಇತಿಹಾಸದಲ್ಲಿ ಸುಕೋ ಸೌಹಾರ್ಧ ಸಹಕಾರಿ ಬ್ಯಾಂಕ್ ಕೃಷಿ ಕ್ಷೇತ್ರ ಸೇರಿದಂತೆ ಎಲ್ಲಾ ಕ್ಷೇತ್ರಗಳ ಅಭಿವೃದ್ದಿಗೆ ಕಾರಣವಾಗಿದೆ. ಪ್ರತಿವರ್ಷವೂ ಬ್ಯಾಂಕ್ ಲಾಭದತ್ತ ಮುನ್ನಡೆಯಲು ಗ್ರಾಹಕರೇ ಕಾರಣ, ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಸಹಕಾರ ನೀಡಿದ ಎಲ್ಲರಿಗೂ ಅಭಿನಂದಿಸುವುದಾಗಿ ತಿಳಿಸಿದರು.

ಎಂ.ಮಲ್ಲಿಕಾರ್ಜುನ್, ಈ.ವೆಂಕಟೇಶ್, ಎ.ಅಭಿಷೇಕ್, ವಿ.ರಮೇಶ್, ಚಂದ್ರಶೇಖರ್, ಟಿ.ಪಿ.ರಂಗಸ್ವಾಮಿ, ಉಮೇಶ್‌ಚಂದ್ರ ಬ್ಯಾನರ್ಜಿ, ವಿನೋದ್‌ಕುಮಾರ್, ಬ್ಯಾಂಕ್ ಅಧಿಕಾರಿಗಳಾದ ಎಂ.ವಿ.ಮಂಜುಳಾ, ಎಂ.ರಂಜಿತ, ಕೀರ್ತಿನಿವೇದಿತ, ಪಿ.ಲಿಖಿತ, ಯು.ವಿನಯ್‌ಕುಮಾರ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಟಾರ್ಗೆಟ್ 10000 ಟೀಮ್‌ವತಿಯಿಂದ 50 ಸಸಿ ನೆಡಲಾಯಿತು



» ಚಿತ್ರದುರ್ಗ

ರೋಟರಿ ಕ್ಲಬ್ ಚಿತ್ರದುರ್ಗ ಮತ್ತು ಟಾರ್ಗೆಟ್ 10000 ಟೀಮ್‌ವತಿಯಿಂದ ಎಸ್ ಆರ್ ಬಿ ಎಂ ಎಸ್ ರೋಟರಿ ಸೇವಾ ಭವನದ ಹಿಂಭಾಗದಲ್ಲಿರುವ ಪಾರ್ಕಿನಲ್ಲಿ ಸುಮಾರು 50 ಸಸಿಗಳನ್ನು ನೆಡಲಾಯಿತು ಕಾರ್ಯಕ್ರಮದಲ್ಲಿ ಟಾರ್ಗೆಟ್ ತಂಡದ ಅಧ್ಯಕ್ಷರಾದ ಸಿದ್ದರಾಮ್ ಜೋಗಿ ಮಧುಸೂದನ್ ರೆಡ್ಡಿ, ಮುಕೇಶ್, ಶಶಿ ಹಾಗೂ ತಂಡದ ಇನ್ನಿತರ ಸದಸ್ಯರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು ಹಾಗೂ ರೋಟರಿ ಕ್ಲಬ್ ವತಿಯಿಂದ ಎಸ್ ವೀರೇಶ್,ವೀರಭದ್ರ ಸ್ವಾಮಿ, ಕನಕರಾಜ್, ವಿಶ್ವನಾಥ್ ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ಕಾಯಕ ರತ್ನ ಪ್ರಶಸ್ತಿಗೆ ಬಾಜನರಾಗಿರುವಂತಹ ಸಿದ್ಧರಾಮ ಜೋಗಿ ಅವರನ್ನು ರೋಟರಿ ಕ್ಲಬ್ ಚಿತ್ರದುರ್ಗ, ಚಿತ್ರದುರ್ಗ ರೋಟರಿ ಟ್ರಸ್ಟ್, ಎಸ್ ಆರ್ ಬಿ ಎಂ ಎಸ್ ರೋಟರಿ ಸೇವಾ ಭವನ, ಎಂ ಜೆ ಕೃಷ್ಣಪ್ಪ ಲೇ ಔಟ್‌ನ ನಾಗರಿಕರು ಮತ್ತು ಇತರ ಸಂಘ ಸಂಸ್ಥೆಯ ಪದಾಧಿಕಾರಿಗಳ ವತಿಯಿಂದ ಗೌರವ ಸಮರ್ಪಣೆಯನ್ನು ಮಾಡಲಾಯಿತು.

### ಎನ್‌ಎಸ್‌ಯುಐ 'ವಿದ್ಯಾರ್ಥಿ ನ್ಯಾಯ ಯಾತ್ರೆ' ವಿದ್ಯಾರ್ಥಿಗಳ ಪ್ರಮುಖ ಸಮಸ್ಯೆಗಳ ಚರ್ಚೆ



» ಚಿತ್ರದುರ್ಗ

ಎನ್‌ಎಸ್‌ಯುಐ ಕರ್ನಾಟಕ ಆಯೋಜಿಸಿರುವ ವಿದ್ಯಾರ್ಥಿ ನ್ಯಾಯ ಯಾತ್ರೆ ಇದು ರಾಜ್ಯದ ವಿದ್ಯಾರ್ಥಿಗಳ ಶೈಕ್ಷಣಿಕ ಸಮಸ್ಯೆಗಳನ್ನು ಎತ್ತಿ ಹಿಡಿಯುವ ಗಂಭೀರ ಪ್ರಯತ್ನವಾಗಿದೆ. ಮಾರ್ಚ್ 17 ರಂದು ಆರಂಭವಾದ ಈ ಯಾತ್ರೆ ಇಂದು ಚಿತ್ರದುರ್ಗ ಜಿಲ್ಲೆಗೆ ತಲುಪಿದ್ದು, ಈ ಸಂದರ್ಭದಲ್ಲಿ ವಿವಿಧ ಕಾಲೇಜುಗಳ ಪ್ರಾಧ್ಯಾಪಕರೊಂದಿಗೆ ಸಭೆ ನಡೆಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಎನ್‌ಎಸ್‌ಯುಐ ಕರ್ನಾಟಕದ ರಾಜ್ಯ ಪ್ರಧಾನ ಕಾರ್ಯದರ್ಶಿಯಾದ ಅನ್ವಿತ್ ಕಟೀಲ್ ಯುಯುಸಿಎಮ್‌ಎಸ್ ಪೋರ್ಟಲ್ ಸಂಬಂಧಿತ ತಾಂತ್ರಿಕ ಸಮಸ್ಯೆಗಳುಶೈಕ್ಷಣಿಕ ಅಡೆತಡೆಗಳು ಹಾಗೂ ಪಠ್ಯಕ್ರಮದ ತೊಂದರೆಗಳುಮೇಕಪ್ ಪರೀಕ್ಷೆಗಳ ನಿರ್ವಹಣೆಯಲ್ಲಿನ ಅಸಮರ್ಪಕತೆ ಮಾರ್ಕ್ಸ್ ಕಾರ್ಡ್ ವಿತರಣೆಯಲ್ಲಿನವಿಳಂಬಮೌಲ್ಯಮಾಪನದ ದೋಷಗಳು ಒನ್ ಟೈಮ್ ಎಕ್ಸಿಟ್ ಸ್ಕೀಮ್ ಕುರಿತು ಸ್ಪಷ್ಟತೆ ಹಾಗೂ ಜೊತೆಗೆ ವಿದ್ಯಾರ್ಥಿ ವೇತನದ ವಿಳಂಬ, ಹಾಸ್ಟೆಲ್ ಸೌಲಭ್ಯಗಳ ಕೊರತೆ ಮತ್ತು ಶೈಕ್ಷಣಿಕ ಮೂಲಸೌಕರ್ಯಗಳ ಕೊರತೆಯಂತಹ ವಿಷಯಗಳೂ ಈ ಸಂದರ್ಭದಲ್ಲಿ ಪ್ರಸ್ತಾಪಿಸಲ್ಪಟ್ಟವು.ವಿದ್ಯಾರ್ಥಿ ನ್ಯಾಯ ಯಾತ್ರೆಯಲ್ಲಿ ಶೈಕ್ಷಣಿಕ ಸುಧಾರಣೆಗಳಿಗೆ ಒತ್ತಾಯ,ಸಮಯಕ್ಕೆ ಸರಿಯಾದ ವಿದ್ಯಾರ್ಥಿ ವೇತನ,ಉತ್ತಮ ಹಾಸ್ಟೆಲ್ ಹಾಗೂಆಧುನಿಕಸೌಲಭ್ಯಗಳು,ವೃತ್ತಿಮಾರ್ಗದರ್ಶನ ಮತ್ತು ಕೌಶಲ್ಯ ಅಭಿವೃದ್ಧಿ,ಉದ್ಯೋಗಾವಕಾಶಗಳ ಸೃಷಿ,ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ಸುರಕ್ಷತೆ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಮೂಲಸೌಕರ್ಯ ಸುಧಾರಣೆ ಬಗ್ಗೆ ಮುಖ್ಯವಾಗಿ ಗಮನ ನೀಡಲಾಗುವುದು ಎಂದರು. ಈ ಯಾತ್ರೆ ಈಗಾಗಲೇ 20ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಪ್ರವಾಸ ಮಾಡಿದ್ದು, ಮುಂದಿನ 11 ಜಿಲ್ಲೆಗಳ ಪ್ರವಾಸ ಮಾಡುವುದರ ಮೂಲಕ ವಿದ್ಯಾರ್ಥಿಗಳ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸಲಾಗುವುದು ಈ ಚಳವಳಿಗೆ ರಾಜ್ಯದಾದ್ಯಂತ ವಿದ್ಯಾರ್ಥಿಗಳಿಂದ ಭಾರೀ ಬೆಂಬಲ ಸಿಕ್ಕಿದೆ ಎಂದರು.ಈ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಸಂಯೋಜಕರಾದ ಹೃತಿಕ್ ರವಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮನೀಷ್ ಜಿ. ರಾಜ್ ರಾಜ್ಯ ಸಂಯೋಜಕ ಶಿವಕುಮಾರ್ ಜಿಲ್ಲಾ ಪದಾಧಿಕಾರಿಗಳಾದ ವಿಶ್ವ ಮತ್ತು ಇತರರುಪಾಲ್ಗೊಂಡಿದ್ದರು

### ತಿಪ್ಪೇಸ್ವಾಮಿ ನೇಮಕ

» ಚಿತ್ರದುರ್ಗ

ರಾಷ್ಟ್ರೀಯ ಈಡಿಗ ಮಹಾಮಂಡಳಿ ಆರ್ಯ ಈಡಿಗ ಸಮಾಜದ ಕರ್ನಾಟಕ ರಾಜ್ಯ ಅಧ್ಯಕ್ಷರಾಗಿ ಸಿ. ತಿಪ್ಪೇಸ್ವಾಮಿ ನೇಮಕ ಮಾಡಲಾಗಿದೆ ಎಂದು ಶ್ರೀ ಪ್ರಾಣವನಂದ ಸ್ವಾಮಿಗಳು ಘೋಷಣೆ ಮಾಡಿದ್ದಾರೆ.ರಾಷ್ಟ್ರೀಯಈಡಿಗಮಹಾಮಂಡಳಿಯ 2025-2026ನೇ ಸಾಲಿನ ವಾರ್ಷಿಕ ಮಹಾ ಸಭೆಯೂ ಇತ್ತೀಚೆಗೆ ರಾಣೆಬೆನ್ನೂರು ತಾಲ್ಲೂಕಿನ ಹರೇಮಲ್ಲಾಪುರ ನಾರಾಯಣ ಗುರುಗಳ ಶಕ್ತಿ ಪೀಠದಲ್ಲಿ ನಡೆದಿದ್ದು ಇದರಲ್ಲಿ ರಾಷ್ಟ್ರೀಯ ಈಡಿಗೆ ಮಹಾಮಂಡಳಿಯ ಚಿತ್ರದುರ್ಗ ಜಿಲ್ಲಾಧ್ಯಕ್ಷರಾಗಿದ್ದ ಸಿ.ತಿಪ್ಪೇಸ್ವಾಮಿಯವರನ್ನು ಶ್ರೀ ಪ್ರಾಣವನಂದ ಸ್ವಾಮಿಗಳು ರಾಷ್ಟ್ರೀಯ ಈಡಿಗ ಮಹಾಮಂಡಳಿ ಆರ್ಯ ಈಡಿಗ ಸಮಾಜದ ಕರ್ನಾಟಕ ರಾಜ್ಯ ಅಧ್ಯಕ್ಷರಾಗಿ ನೇಮಕ ಮಾಡಿದ್ದಾರೆ.

### ಭಗೀರಥ ಜಯಂತಿಯಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಹೇಳಿಕೆ

# ಭಗೀರಥ ಪ್ರಯತ್ನ ಮಾಡಿದಲ್ಲಿ ಯಶಸ್ಸು ನಿಶ್ಚಿತ

» ದಾವಣಗೆರೆ

ಭಗೀರಥರಂತೆ ಸತತ ಪ್ರಯತ್ನ ಮಾಡಿದಲ್ಲಿ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾದ ಭಗೀರಥ ಜಯಂತಿಯಲ್ಲಿ ಭಗೀರಥ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಒಂದಲ್ಲಾ ಒಂದು ಕ್ಷೇತ್ರದಲ್ಲಿ ಪರಿಣಿತಿ ಹೊಂದಿರುತ್ತಾರೆ. ಹಾಗಾಗಿ ಸೋತಾಗ ಕುಗ್ಗದೇ, ಭಗೀರಥರಂತೆ ಸತತ ಪ್ರಾಮಾಣೀಕವಾಘಿ ಯತ್ನವ ಮಾಡಿದಲ್ಲಿ ಯಾವುದಾದರೂ ಒಂದು ಕ್ಷೇತ್ರದಲ್ಲಿ ಸಾಧನೆ ನಿಶ್ಚಿತ ಎಂದ ಅವರು, ಪ್ರತಿಯೊಂದು ಕುಟುಂಬದಲ್ಲಿ ಭಗೀರಥರಂತಹ ವ್ಯಕ್ತಿ ಜನಿಸಿದರೆ ದೇಶ, ನಾಡು, ಸಮಾಜ, ಸಂಸ್ಕೃತಿ ಮತ್ತಷ್ಟು ಸಮೃದ್ಧಿಯಾಗಲಿದೆ. ಅವರ ಜೀವನ ಆದರ್ಶಗಳು ಭವಿಷ್ಯದ ಪೀಳಿಗೆಗೆ ದಾರಿದೀಪವಾಗಲಿ ಎಂದು



ಆಶಯ ವ್ಯಕ್ತಪಡಿಸಿದರು.

ನಿವೃತ್ತ ಪ್ರಾಂಶುಪಾಲರಾದ ಅಂಜಿನಪ್ಪ ಮತನಾಡಿ, ಭಗೀರಥನು ಇಕ್ವಾಕು ವಂಶದ ರಾಜನಾಗಿದ್ದು, ತನ್ನ ಪೂರ್ವಜರ ಆತ್ಮಗಳಿಗೆ ಶಾಂತಿ ಸಿಗಲೆಂದು ಅವನು ತನ್ನ ನಿಷ್ಠೆ ಹಾಗೂ ಪ್ರಾಮಾಣಿಕ ಕಠಿಣ ತಪಸ್ಸು ಮಾಡಿ ಬ್ರಹ್ಮನನ್ನು ಮೆಚ್ಚಿಸಿ, ಪಂಚಭೂತಗಳಲ್ಲಿ ಒಂದಾದ ಗಂಗೆಯನ್ನು ಧರೆಗಿಳಿಸಿದ ಮಹಾನ್ ಮಾನವತವಾದಿ.

ಅಂತಹ ಪವಿತ್ರವಾದ ಗಂಗೆಯನ್ನು ಇಡೀ ಮನುಕುಲಕ್ಕೆ ನೀಡಿದ ಪುರಾಣ ಪುರುಷ. ಸತತ ಪ್ರಯತ್ನದಿಂದ ಅಸಾಧ್ಯವಾದುದು ಸಾಧ್ಯ ಎಂದು ತೋರಿದ ಆದರ್ಶ ಪುರುಷ, ಮನುಷ್ಯ ಪ್ರಯತ್ನಕ್ಕೆ ಮಾದರಿ ಈ ಭಗೀರಥ ಮಹಾಶಯ. ಇಂತಹ ವ್ಯಕ್ತಿಯನ್ನು ಕೇವಲ ಒಂದು ಜಾತಿ, ಸಮುದಾಯಕ್ಕೆ ಹಾಗೂ ಜಯಂತಿಗಳಂದು ಪುಷ್ಪಾರ್ಚನೆಗೆ ಸೀಮಿತಗೊಳಿಸದೇ, ಅನುಸರಣೆಯ ಹಂತವನ್ನು ಪಡೆಯಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಈ ವೇಳೆ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಹೆಚ್ಚುವರಿ ಪೊಲೀಸ್‌ವರಿಷ್ಠಾಧಿಕಾರಿ ವಿಜಯ್ ಕುಮಾರ್ ಎಂ ಸಂತೋಷ್, ದೂಡ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ಉಪ್ಪಾರ ಸಮಾಜದ ಗೌರವಾಧ್ಯಕ್ಷ ತಿಪ್ಪಣ್ಣ, ಜಿಲ್ಲಾಧ್ಯಕ್ಷ ಎಂ.ರಮೇಶ್, ತಾಲ್ಲೂಕು ಅಧ್ಯಕ್ಷ ಗಿರೀಶ್ ಹೊಸನಾಯಕನಹಳ್ಳಿ, ಕಾರ್ಯದರ್ಶಿ ಹೆಚ್.ಎಸ್,ಹಾಲೇಶ್, ಮಾಜಿ ಉಪ ಮೇಯರ್ ಮಂಜುಳಮ್ಮ ಸಮಾಜದ ಮುಖಂಡರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಶ್ರಮಜೀವಿ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ಬದ್ದ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಆರ್ಥಿಕ ಕ್ಷೇತ್ರವನ್ನು ಅಭಿವೃದ್ದಿ ಪಡಿಸುವ ನಿಟ್ಟಿನಲ್ಲಿ ಕಾರ್ಮಿಕರ ಪರಿಶ್ರಮ ಬಹಳಷ್ಟಿದೆ. ಕಾರ್ಮಿಕರು ತಮಗೆ ವಹಿಸಿದ ಜವಾಬ್ದಾರಿಯನ್ನು ಪೂರ್ಣಪ್ರಮಾಣದಲ್ಲಿ ಮಾಡುವ ಮೂಲಕ ಅನೇಕ ಉತ್ಪಾದನೆಗಳು ಸಕಾಲದಲ್ಲಿ ಮಾರುಕಟ್ಟೆಗೆ ಬರಲು ನೆರವಾಗಿದ್ದಾರೆ. ಕಾರ್ಮಿಕರಿಗೆ ಹೆಚ್ಚಿನ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮುಂದಾಗಿದೆ ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು. ಅವರು, ನಗರದ ಶಾಸಕ ಭವನದಲ್ಲಿ ಕಾರ್ಮಿಕ ಇಲಾಖೆ, ಕರ್ನಾಟಕ ರಾಜ್ಯಕಟ್ಟಡ ನಿರ್ಮಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ತರಬೇತಿ ಶಿಬಿರದಲ್ಲಿ ಪಾಲ್ಗೊಂಡ ಸುಮಾರು 152 ಫಲಾನುಭವಿಗಳಿಗೆ ಸುರಕ್ಷಿತ ಕಿಟ್ ವಿತರಿಸಿ ಮಾತನಾಡಿದರು. ಕಾರ್ಮಿಕ ಇಲಾಖೆ ಸರ್ಕಾರದ ಎಲ್ಲಾ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಲುಮುಂದಾಗಬೇಕು. ಕಾರ್ಮಿಕರು ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುವ ಪ್ರತಿಯೊಬ್ಬ ಕಾರ್ಮಿಕನೂ ನೊಂದಾವಣೆ



ಮಾಡಿಸಿಕೊಂಡು ಕಾರ್ಡ್ ಪಡೆಯಬೇಕು. ಕಾರ್ಮಿಕ ಇಲಾಖೆ ಕಾರ್ಮಿಕರಿಗಾಗಿ ನಿರೂಪಿಸಿದ ವಿವಿಧ ಸೌಲಬ್ಯಗಳನ್ನು ಕಾರ್ಮಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಕಾರ್ಮಿಕ ಅಧಿಕಾರಿ ಕುಸುಮ ಮಾತನಾಡಿ, ಪ್ರಸ್ತುತ ತಾಲ್ಲೂಕಿನಾದ್ಯಂತ ಈಗಾಗಲೇ 35ಸಾವಿರ ಕಾರ್ಮಿಕರು ಹೆಸರು ನೊಂದಾವಣೆ ಮಾಡಿಕೊಂಡಿದ್ದಾರೆ. ನೊಂದಾವಣೆಯಿಂದ ದೂರ ಉಳಿದ ಕಾರ್ಮಿಕರನ್ನು ಪತ್ತೆಹಚ್ಚಿ ಅವರಿಗೂ ಇಲಾಖೆ ಕಾರ್ಡ್ ನೀಡಿ ಸೌಲಭ್ಯ ವ್ಯಪ್ತಿಗೆ ಒಳಪಡುವಂತೆ ಜಾಗ್ರತೆ ವಹಿಸಲಾಗುವುದು. ಪ್ರಸ್ತುತ ತರಬೇತಿ ಪಡೆದ 152 ಫಲಾನುಭವಿಗಳಿಗೆ ಪ್ರಭೂಧತಾ ಪ್ರವೇಟ್ ಖಾಸಗಿ ಕಂಪನಿ ಸುರಕ್ಷಣಾ ಸಲಕರಣೆ ಕಿಟ್‌ಗಳನ್ನು ನೀಡಿದೆ. ಅವುಗಳ ಸದುಪಯೋಗ ಪಡೆಯಲು ಕಾರ್ಮಿಕರಿಗೆ ಮನವಿ ಮಾಡಿದರು. ಪ್ರಭೂಧತಾ ಕಂಪನಿಯ ಯೋಜನಾ ಸಂಯೋಜಕ ಮಂಜುನಾಥ, ನಗರಸಭೆ ಅಧ್ಯಕ್ಷೆ ಆರ್.ಮಂಜುಳಾಪ್ರಸನ್ನಕುಮಾರ್, ಉಪಾಧ್ಯಕ್ಷೆ ಕವಿತಾಬೋರಯ್ಯ, ಸದಸ್ಯರಾದ ಸುಮಭರಮಣ್ಣ, ಶಿಲ್ಪಿಮುರುಳಿ, ರಮೇಶಗೌಡ, ಕೆ.ವೀರಭದ್ರಪ್ಪ, ಎಂ.ಜೆ.ರಾಘವೇಂದ್ರ ಉಪಸ್ಥಿತರಿದ್ದರು.

### ತಪಸ್ಸ ಶಕ್ತಿಯ ಮೂಲಕ ಗಂಗೆಯನ್ನು ಭೂಮಿಗೆ ತರಿಸಿದ ಏಕೈಕ ಋಷಿಮುನಿ ಭಗೀರಥ ಮಹರ್ಷಿ: ಇಒ



» ಚಳ್ಳಕೆರೆ

ತಪಸ್ಸು ಶಕ್ತಿಯ ಮೂಲಕ ಭಗೀರಥ ಮಹರ್ಷಿಗಳು ಈ ನಾಡುಕಂಡ ಶ್ರೇಷ್ಠ ಮುನಿಗಳು. ತಮ್ಮ ತಪಸ್ಸಿನಿಂದಲೇ ಗಂಗೆಯನ್ನು ಭೂಮಿಗೆ ತರಿಸಿದ ಮಹಾನ್ ಶ್ರೇಷ್ಠಮುನಿ ಭಗೀರಥ ಮಹರ್ಷಿಗಳು ಎಂದು ತಾಲ್ಲೂಕುಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ತಿಳಿಸಿದರು. ಅವರು, ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಭಾನುವಾರ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ ಭಗೀರಥ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಸತ್ಯ ಮತ್ತು ಪ್ರಾಮಾಣಿಕತೆಯಿಂದ ಬದುಕು ನಡೆಸಬೇಕೆಂಬ ಕಲ್ಪನೆಯನ್ನು ಹುಟ್ಟುಹಾಕಿದ್ದೇ ಭಗೀರಥ ಮಹರ್ಷಿಗಳು. ದೇವರು ಮತ್ತು ದೈವತ್ವದ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಿದ ಮಹಾನೀಯರು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್‌ಪಾಷ, ರಾಜ್ಯ ಸರ್ಕಾರ ಇಂತಹ ಮಹಾನೀಯರ ಪವಾಡಗಳು ಹಾಗೂ ಜನರಿಗಾಗಿ ಅವರು ಮಾಡಿದ ಸೇವೆಯನ್ನು ನಿರಂತರ ಸ್ಮರಿಸುವ ಸಲುವಾಗಿ ಭಗೀರಥ ಜಯಂತಿಯನ್ನು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮೂಲಕ ನಡೆಸುತ್ತಾ ಬಂದಿದೆ. ಭಗೀರಥ ಮಹರ್ಷಿಗಳ ಆದರ್ಶಗಳು ನಮ್ಮೆಲ್ಲರಿಗೂ ಶ್ರೀರಕ್ಷೆ ಎಂದರು.

ನಗರಸಭಾ ಅದ್ಯಕ್ಷೆ ಆರ್.ಮಂಜುಳಾ, ಉಪಾಧ್ಯಕ್ಷೆ ಕವಿತಾ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ, ಸದಸ್ಯರಾದ ಸುಮ, ಎಂ.ಜೆ. ರಾಘವೇಂದ್ರ, ನಾಮನಿರ್ದೇಶಕ ಸದಸ್ಯರಾದ ಆರ್.ವೀರಭದ್ರಪ್ಪ, ನೇತಾಜಿಪ್ರಸನ್ನ, ಪೌರಾಯುಕ್ತ ಜಗರೆಡ್ಡಿ, ಶಿರಸ್ಥೇದಾರ್ ಸದಾಶಿವಪ್ಪ, ಡಿ.ಶ್ರೀನಿವಾಸ್, ಪ್ರಕಾಶ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಗಳಾ, ಸದಸ್ಯ ಅನಿತಾ, ತಾಲ್ಲೂಕು ಉಪ್ಪಾರಸಂಘದ ಗೌರವಾಧ್ಯಕ್ಷ ಎಸ್. ಯಲ್ಲಪ್ಪ, ಅಧ್ಯಕ್ಷ ಹನುಮಂತಪ್ಪ, ಎಲ್‌ಐಸಿದುಗ್ಗಾವರರಂಗಸ್ವಾಮಿ, ರವಿಕುಮಾರ್, ಮಾರುತಿ, ಮುಸ್ಟೂರಲಿಂಗಪ್ಪ, ಉಮೇಶ್ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ವನಮಹೋತ್ಸವದಲ್ಲಿ ಎತ್ತರದ ಸಸಿಗೆ ಆದ್ಯತೆ: ಖಂಡ್ರೆ

» ದಾವಣಗೆರೆ

ಪ್ರಸಕ್ತ ವರ್ಷದ ಮುಂಗಾರಿನಲ್ಲಿ ಅರಣ್ಯ ಇಲಾಖೆ ನಡೆಸುವ ವನಮಹೋತ್ಸವದಲ್ಲಿ ರಸ್ತೆಯ ಬದಿಗಳಲ್ಲಿ ಎತ್ತರದ ಸಸಿಗಳನ್ನು ನೆಡಲು ಪ್ರಥಮಾಧ್ಯತೆ ನೀಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ನಗರದ ಅರಣ್ಯ ಭವನದಲ್ಲಿ ಶನಿವಾರ ಅರಣ್ಯ ಮತ್ತು ಪರಿಸರ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಅವರು ಮತನಾಡಿದರು.ವನಮಹೋತ್ಸವದಲ್ಲಿ ಎತ್ತರದ ಸಸಿಗಳನ್ನು ನೆಟ್ಟರೆ, ಅವು ಬದುಕುಳಿಯುವ ಸಾಧ್ಯತೆ ಹೆಚ್ಚಿರುತ್ತದೆ. ಇದು ಹಸಿರು ವಲಯ





ಹೆಚ್ಚಳಕ್ಕೆ ಇಂಬು ನೀಡುತ್ತದೆ ಎಂದರು.

**ಒತ್ತುವರಿ ತೆರವಿಗೆ ಸೂಚನೆ::** ಅರಣ್ಯ ಪ್ರದೇಶದ ಒತ್ತುವರಿ ಆಗದಂತೆ ಕಟ್ಟೆಚ್ಚರ ವಹಿಸುವಂತೆ ಸೂಚಿಸಿದ ಅವರು, 2015ಕ್ಕೂ ಮೊದಲು ಪಟ್ಟಾಭೂಮಿ ಸೇರಿ 3 ಎಕರೆಗಿಂತ ಕಡಿಮೆ ಅರಣ್ಯ ಒತ್ತುವರಿ ಮಾಡಿರುವ ಪ್ರಕರಣ ಹೊರತು ಪಡಿಸಿ ಉಳಿದ ಎಲ್ಲಾ ಅರಣ್ಯ ಒತ್ತುವರಿ ತೆರವಿಗೆ ತ್ವರಿತ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ 2ಸಾವಿರ ಎಕರೆಗೂ ಹೆಚ್ಚು ಅರಣ್ಯ ಒತ್ತುವರಿಯಾಗಿದ್ದು, ನ್ಯಾಯಾಲಯದಲ್ಲಿರುವ ಪ್ರಕರಣಗಳ ಶೀಘ್ರ ಇತ್ಯರ್ಥಕ್ಕೆ ಕ್ರಮ ವಹಿಸಲೂ ಅಧಿಕರಿಗಳಿಗೆ ತಾಕೀತು ಮಾಡಿದರು.

## ಪ್ರಮುಖ ಸುದ್ದಿ

# ಕಟ್ಟಡ ಕಾರ್ಮಿಕರಿಗೆ ಸೌಲಭ್ಯ ನೀಡುವಲ್ಲಿ ಸರ್ಕಾರ ವಿಫಲ

» ಚಿತ್ರದುರ್ಗ

ಕಳೆದ ಒಂದು ವರ್ಷಗಳಿಂದ ರಾಜ್ಯ ಸರ್ಕಾರದ ಮಂತ್ರಿಗಳು ಕಟ್ಟಡ ಕಾರ್ಮಿಕರಿಗೆ ಯಾವುದೇ ರೀತಿಯ ಹಣಕಾಸಿನ ಸೌಲಭ್ಯಗಳನ್ನು ನೀಡುವುದರಲ್ಲಿ ವಿಫಲರಾಗಿದ್ದಾರೆ ಮಂಡಳಿಯಲ್ಲಿ ಇರುವ ಹಣವನ್ನು ತಡೆ ಹಿಡಿದು ಒಂದು ವರ್ಷಕ್ಕೆ ಬರುವ ಬಡ್ಡಿಯಿಂದ ಸಂತೋಷ ಲಾರ್ಡ್ ಫೌಂಡೇಶನ್‌ಗೆ ಮಂಡಳಿಯ ಹಣ ಹೋಗುತ್ತಿದೆ ಎಂದು ಕರ್ನಾಟಕ ರಾಜ್ಯ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ವೈ ಕುಮಾರ್ ಆರೋಪಿಸಿದ್ದಾರೆ.

ಚಿತ್ರದುರ್ಗನಗರದಪ್ರವಾಸಿಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕ ದಿನಾಚರಣೆಯ ಕೇವಲ ಸರ್ಕಾರಿ ಅಧಿಕಾರಿಗಳ ರಜೆಗೆ ಸೀಮಿತವಾಗಿದ್ದು ಯಾವುದೇ ಕಚೇರಿಗಳಲ್ಲಿ ಕಾರ್ಮಿಕ ದಿನಾಚರಣೆಯನ್ನು ಆಚರಿಸುವಲ್ಲಿ ಎಲ್ಲಾ ಇಲಾಖೆಗಳು ಮತ್ತು ರಾಜ್ಯದ ಎಲ್ಲಾ ಅಧಿಕಾರಿಗಳು ವಿಫಲರಾಗಿರುವುದರಿಂದ ಕಾರ್ಮಿಕ ದಿನಾಚರಣೆಗೆ ವಿಲ್ಲದಂತಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಕಚೇರಿಗಳಲ್ಲಿ





ತಾಲೂಕು ಕಚೇರಿಗಳಲ್ಲಿ ಮೇ ಒಂದನೇ ತಾರೀಕು ಸರ್ಕಾರಿ ಗ್ರಾಮ ಕಾರ್ಯಕ್ರಮದ ಭಾಗವಾಗಿ ಕಾರ್ಮಿಕ ದಿನಾಚರಣೆಯನ್ನು ಮಾಡಲು ಸರ್ಕಾರಕ್ಕೆ ಎಚ್ಚರಿಕೆಯನ್ನು ನೀಡಲಾಯಿತು.

ಕಾರ್ಮಿಕ ದಿನಾಚರಣೆಗಾಗಿ ಸರ್ಕಾರವು ಹಣವನ್ನು ನೀಡುತ್ತಾ ಬಂದಿದ್ದರು ಕೂಡ ಅಧಿಕಾರಿಗಳ ಇಚ್ಛಾಶಕ್ತಿಯಿಂದ ಕಾರ್ಮಿಕರಿಗೆ ಯಾವುದೇ ರೀತಿಯ ಗೌರವ ಸಮರ್ಪಣೆ ಮಾಡುವುದರಲ್ಲಿ ಹಿಂದೆ ಬೀಳಾಗಿದೆ. ಇದರ ಬಗ್ಗೆ ಹಿಂದಿನ ರಾಜ್ಯ ಸರ್ಕಾರಗಳು ವಿಫಲವಾಗಿವೆ ಈ ನಿಟ್ಟಿನಲ್ಲಿ ಈ ಸಭೆಯಲ್ಲಿ ನಾವು ರಾಜ್ಯ ಸರ್ಕಾರಕ್ಕೆ ಎಚ್ಚರಿಸುವುದೇನೆಂದರೆ ಪ್ರತಿವರ್ಷ ಮೇ 1ನೇ ತಾರೀಖು ಕಾರ್ಮಿಕ ಸಂಘಟನೆಗಳ ಮುಖಂಡರನ್ನು ಕರೆದು ನೋಂದಾಯಿತ ಕಟ್ಟಡ ಕಾರ್ಮಿಕರನ್ನು ಅವರ ಅನುಭವದ ಗುರುತಿಸಿಅವರಿಗೆಸನ್ಮಾನಮಾಡುವಂಥದ್ದು ಮತ್ತೆ ಸರ್ಕಾರದಿಂದ ಗೌರವ ಸರ್ವ ಸಮರ್ಪಣೆ ಮಾಡುವಂತಹ ಕೆಲಸವನ್ನು ಸರ್ಕಾರ ಮಾಡಬೇಕಾಗಿರುತ್ತದೆ ಎಂದು ತಿಳಿಸಿದ್ದಾರೆ.

ಒಂದು ವರ್ಷದಿಂದ ಪಿಂಚಣಿ ಹಣ ಬಿಡುಗಡೆಯಾಗಿಲ್ಲ ಅಪಘಾತ ಮರಣದ ಹಣ ಬಿಡುಗಡೆಯಾಗಿಲ್ಲ ಮದುವೆ ಸಹಾಯಧನಬಿಡುಗಡೆಯಾಗಿಲ್ಲಮೆಡಿಕಲ್ ಬಿಲ್ ಬಿಡುಗಡೆಯಾಗಿಲ್ಲ ವಿದ್ಯಾರ್ಥಿ ವೇತನ ಮರೀಚಿಕೆಯಾಗಿದೆ ಇದರ ಬಗ್ಗೆ ಸರ್ಕಾರಕ್ಕೆ ಎಚ್ಚರಿಕೆ ನೀಡುತ್ತಿದ್ದೇವೆ ಇದೇ ರೀತಿ ಮುಂದುವರೆದರೆ ರಾಜ್ಯಾದ್ಯಂತ ಉಗ್ರವಾದ ಪ್ರತಿಭಟನೆಯನ್ನು ನಡೆಸುತ್ತಿವೆ ಬೋಗಸ್ ಕಾರ್ಯಕ್ರಮಗಳ ಹೆಸರಿನಲ್ಲಿ ಹಣನ ಲೂಟಿ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ನಾವು ಎಚ್ಚರಿಕೆ ಗಂಟೆಯನ್ನು ಹೊಡೆಯುತ್ತಿದ್ದೇವೆ ಎಂದು ಕುಮಾರ್ ತಿಳಿಸಿದರು. ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದಿಂದ ಸಭೆಯನ್ನು ನಡೆಸಿ ದಿನಾಂಕ 20.05.2025ರ ಮಂಗಳವಾರ ನಮ್ಮ ಸಂಘದ ವತಿಯಿಂದ ಕಾರ್ಮಿಕ ದಿನಾಚರಣೆಯನ್ನು ಆಚರಿಸಲು ತೀರ್ಮಾನಿ ಸಲಾಯಿತು ಹಾಗೂ ಕಾರ್ಮಿಕ ದಿನಾಚರಣೆ ಅಂಗವಾಗಿ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲು ಸಭೆಯು ತೀರ್ಮಾನಿಸಲಾಯಿತು. ಪತ್ರಿಕಾಗೋಷ್ಠಿ ರಾಜ್ಯ ಉಪಾಧ್ಯಕ್ಷರಾದ ಕೆ ಗೌಸ್‌ಪೀರ್, ರಾಜ್ಯ ಖಜಾಂಚಿ ಡಿ ಈಶ್ವರಪ್ಪ, ಉಪಾಧ್ಯಕ್ಷರು ಗೌಸ್‌ಖಾನ್, ರಾಜ್ಯ ನಿರ್ದೇಶಕರು ಮಾಹಾಂತೇಶ್, ಗೌರವಾಧ್ಯಕ್ಷರು ತಿಮ್ಮಯ್ಯ ಎಂ, ರಾಜ್ಯ ನಿರ್ದೇಶಕರು ಉಮೇಶ್, ಸಂಘದ ಪದಾಧಿಕಾರಿಗಳು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಮಳೆ ವರದಿ: ಚಿತ್ರದುರ್ಗ ಜಿಲ್ಲೆಯಲ್ಲಿ 6.4 ಮಿ.ಮೀ ಮಳೆ

» **ಚಿತ್ರದುರ್ಗ**

ಶುಕ್ರವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 6.4 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 7.1 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 11.3 ಮಿ.ಮೀ, ಹಿರಿಯೂರು ತಾಲ್ಲೂಕು 0.3 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 3.6 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 4.3 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 17.8 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 2.8 ಮಿ.ಮೀ, ನಾಯಕನಹಟ್ಟಿ 13.3 ಮಿ.ಮೀ, ಪರಶುರಾಂಪುರ 4.4 ಮಿ.ಮೀ, ತಳಕು 9.8 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 2 ಮಿ.ಮೀ, ಭರಮಸಾಗರ 25.7 ಮಿ.ಮೀ, ಹಿರೇಗುಂಟನೂರು 10.8 ಮಿ.ಮೀ, ತುರುವನೂರು 12.4 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 3 ಮಿ.ಮೀ, ಬಿ.ದುರ್ಗ 7.8 ಮಿ.ಮೀ, ರಾಮಗಿರಿ 1.4 ಮಿ.ಮೀ, ತಾಳ್ಯ 2.7 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 4.2 ಮಿ.ಮೀ, ಮಾಡದಕೆರೆ 6 ಮಿ.ಮೀ, ಮತ್ತೋಡು 7 ಮಿ.ಮೀ,ಶ್ರೀರಾಂಪುರ 2.5 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 14.6 ಮಿ.ಮೀ ಹಾಗೂ ದೇವಸಮುದ್ರದಲ್ಲಿ 21.4 ಮಿ.ಮೀ ಮಳೆಯಾಗಿದೆ.

**15 ಮನೆಗಳಿಗೆ ಹಾನಿ:** ಮಳೆಯಿಂದಾಗಿ ಜಿಲ್ಲೆಯಾದ್ಯಂತ 13 ಮನೆಗಳು ಭಾಗಶಃ ಹಾಗೂ 2 ಮನೆಗಳು ಸಂಪೂರ್ಣ ಹಾನಿಯಾಗಿವೆ. 2 ದೊಡ್ಡಜಾನುವಾರು ಹಾನಿ, 24.7 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿ ಹಾಗೂ 4.5 ಹೆಕ್ಟೇರ್ ಕೃಷಿ ಬೆಳೆಹಾನಿಯಾಗಿದೆ. ಚಿತ್ರದುರ್ಗ ತಾಲ್ಲೂಕಿನ 4 ಭಾಗಶಃ ಮನೆ ಹಾನಿ, ಚಳ್ಳಕೆರೆ ತಾಲ್ಲೂಕಿನಲ್ಲಿ 1 ದೊಡ್ಡ ಜಾನುವಾರು, ತಲಾ 3 ಹೆಕ್ಟೇರ್ ಕೃಷಿ ಹಾಗೂ ತೋಟಗಾರಿಕೆ ಬೆಳೆ, ಹೊಳಲ್ಕೆರೆ ತಾಲ್ಲೂಕಿನಲ್ಲಿ 2.5 ಹೆಕ್ಟೇರ್ ತೋಟಗಾರಿಕೆ ಬೆಳೆ, ಹೊಸದುರ್ಗ ತಾಲ್ಲೂಕಿನಲ್ಲಿ 14 ಹೆಕ್ಟೇರ್ ತೋಟಗಾರಿಕೆ ಬೆಳೆ, ಹಿರಿಯೂರು ತಾಲ್ಲೂಕಿನಲ್ಲಿ 5 ಭಾಗಶಃ 2 ಪೂರ್ಣ ಮನೆ ಹಾಗೂ 4.7 ಹೆಕ್ಟೇರ್ ತೋಟಗಾರಿಕೆ ಹಾಗೂ 1 ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ 2 ಭಾಗಶಃ ಮನೆ ಹಾನಿಯಾಗಿದೆ, 1 ದೊಡ ಜಾನುವಾರು ಮೃತಪಟ್ಟಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ತಿಳಿಸಿದೆ.

### ಮೇ 22, 23 ರಂದು ರಾಷ್ಟ್ರೀಯ ಕಾರ್ಯಾಗಾರ

» **ದಾವಣಗೆರೆ**

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ಮೇ.22 ಮತ್ತು 23ರಂದು ಅಕಾಡೆಮಿ ಕಚೇರಿಯಲ್ಲಿ "Lakes-2025: Healthy Lakes, Healthy Lives: The Need For Conversation" ಎಂಬ ವಿಷಯಾಧಾರಿತವಾಗಿ ರಾಷ್ಟ್ರೀಯಕಾರ್ಯಗಾರವನ್ನುಆಯೋಜಿಸಲಾಗಿದೆ. ಕಾರ್ಯಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದು, ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು, ಶೈಕ್ಷಣಿಕ ತಜ್ಞರು, ಯುವ ಉದ್ಯಮದಾರರು ಭಾಗವಹಿಸಬಹುದಾಗಿದೆ.

ಮತ್ತು ಯುವ ವಿಜ್ಞಾನಿಗಳು ಹಾಗೂ ಸಂಶೋಧನಾ ಅಭ್ಯರ್ಥಿಗಳು ಸಂಶೋಧನಾ ಪ್ರಬಂಧ ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ ಸಂಶೋಧನಾ ಪತ್ರಿಕೆಗಳಿಗೆ ನಗದು ಬಹುಮಾನ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಮೇ.17 ರೊಳಗೆ https://forms.gle/qYAgXUbi6iAqUgaH7 ಜಾಲತಾಣದ ಮೂಲಕ ನೊಂದಾಯಿಸಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಗಾರದ ಸಂಯೋಜಕರ ದೂರವಾಣಿಸಂಖ್ಯೆ:9845258894,9620767817 ಮತ್ತು 9611198189 ಗೆ ಅಥವಾ ಅಕಾಡೆಮಿಯ ವೆಬ್‌ಸೈಟ್ https//:kstacademy.in ನ್ನು ವೀಕ್ಷಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಬಸವ ತತ್ವ ಪಾಲಿಸಿದರೆ ನಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ

» **ಬೆಂಗಳೂರು**

ಬಸವಣ್ಣನವರು ದಯವೇ ಧರ್ಮದ ಮೂಲವಯ್ಯ ಅಂತ ಒಂದೇ ಪದದಲ್ಲಿ ಹೇಳಿದ್ದಾರೆ. ಆದರೆ, ಧರ್ಮದ ಹೆಸರಿನಲ್ಲಿ ಹಿಂಸೆ ಮಾಡುವ ಶಕ್ತಿಗಳು ಹುಟ್ಟಿಕೊಂಡಿವೆ. ಬಸವಣ್ಣನ ತತ್ವ ಪಾಲಿಸಿದರೆ ನಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.ರವೀಂದ್ರ ಕಲಾಕ್ಷೇತ್ರದಲ್ಲಿ ಬಸವ ವೇದಿಕೆ ಬೆಂಗಳೂರು ಏರ್ಪಡಿಸಿದ್ದ ಬಸವ ಜಯಂತಿ ಹಾಗೂ ಬಸವಶ್ರೀ ಮತ್ತು ವಚನ ಸಾಹಿತ್ಯಶ್ರೀ ಪ್ರಶಸ್ತಿ ಪ್ರದಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬಸವಣ್ಣ ಒಬ್ಬ ವಿಸ್ಮಯ ವ್ಯಕ್ತಿ. ಯಾರಾದರು ಬಸವಣ್ಣನನ್ನು ಪರಿಪೂರ್ಣವಾಗಿ ಅರ್ಥ ಮಾಡಿಕೊಂಡಿದ್ದೇನೆ ಎಂದರೆ ಆ ವ್ಯಕ್ತಿಗೆ ಇನ್ನೂ ಪರಿಪೂರ್ಣತೆ ಬಂದಿಲ್ಲ ಎಂದರ್ಥ. ಬಸವಣ್ಣ ಅಂದಿಗೂ ಪ್ರಸ್ತುತ ಇಂದಿಗೂ ಪ್ರಸ್ತುತ ಎಂದರು.




## ಮಹಿಳೆಯರ ಘನತೆ, ಸ್ವಾತಂತ್ರ್ಯ, ಸಮಾನತೆ, ಪುರುಷರು ಕೊಡುವ ಸಹಾನುಭೂತಿ, ಭಿಕ್ಷೆ, ಸಹಾಯ ಸೇವೆ, ಗೌರವವಲ್ಲ. ಅದು ಅವರ ಹಕ್ಕು ನೆನಪಿರಲಿ......

ಒಂದು ಕುತೂಹಲಕಾರಿ, ಆಶ್ಚರ್ಯಕಾರಿ, ಆಘಾತಕಾರಿ ಬೆಳವಣಿಗೆ ಕರ್ನಾಟಕದ ರಾಜಕೀಯ ಮತ್ತು ಮಾಧ್ಯಮ ಲೋಕದಲ್ಲಿ ನಡೆಯುತ್ತಿದೆ. ಸೀಡಿ ಅಥವಾ ಪೆನ್ ಡ್ರೈ ವ್ ಅಥವಾ ಮೊಬೈಲ್ ಅಥವಾ ಹಿಡನ್ ಕ್ಯಾಮೆರಾ ಅಥವಾ ಆ ರೀತಿಯ ಗ್ಯಾಜೆಟ್ಗಳಲ್ಲಿ ಚಿತ್ರೀಕರಣಗೊಂಡ, ಅನೇಕರ ಅನೈತಿಕ ಲೈಂಗಿಕ ಚಟುವಟಿಕೆಗಳ ದೃಶ್ಯಗಳು ಈಗಾಗಲೇ ಗುಪ್ತವಾಗಿ ಸಂಗ್ರಹವಾಗಿದೆ.......

ಅದನ್ನು ಬಳಸಿಕೊಂಡು ಕೆಲವರು ಬ್ಲಾಕ್ ಮೇಲ್ ಮಾಡಿ ಹಣ ಮಾಡುತ್ತಿದ್ದಾರೆ, ಹನಿಟ್ರ್ಯಾಪ್ ಗಿಂತ ಹೆಚ್ಚಾಗಿ ಇದನ್ನು ನಿರ್ಧಿಷ್ಟವಾಗಿ ಕೆಲವು ವ್ಯಕ್ತಿಗಳನ್ನು ಟಾರ್ಗೆಟ್ ಮಾಡಿ, ರಾಜಕೀಯವಾಗಿ ಮುಗಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಎಲ್ಲ ಕಡೆ ಮಾತುಕತೆಗಳು ನಡೆಯುತ್ತಿದೆ......

ಅದರಲ್ಲೂ ಮುಖ್ಯವಾಗಿ ಕರ್ನಾಟಕದ ಉಪಮುಖ್ಯಮಂತ್ರಿ ಶ್ರೀ ಡಿ ಕೆ ಶಿವಕುಮಾರ್ ಅವರ ಬಳಿ ನೂರಾರು ಸೀಡಿಗಳಿದ್ದು ಅದರಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ದೊಡ್ಡ ಹುದ್ದೆಯ ಸರ್ಕಾರಿ ಅಧಿಕಾರಿಗಳು, ವಿರೋಧ ಪಕ್ಷದ ನಾಯಕರು ಮುಂತಾದ ಎಲ್ಲರ ಲೈಂಗಿಕ ಕ್ರಿಯೆಯ ಸೀಡಿಗಳನ್ನು ಸಂಗ್ರಹಿಸಿ ಇಟ್ಟುಕೊಂಡಿದ್ದಾರೆ ಎಂದು ಮಾಜಿ ಮಂತ್ರಿ ರಮೇಶ್ ಜಾರಕಿಹೊಳಿ ಅವರು ನೇರವಾಗಿ ಮಾಧ್ಯಮಗಳ ಮುಂದೆ ಆರೋಪ ಮಾಡುತ್ತಾರೆ.....

ಹಾಗೆಯೇ ಇದೇ ರಮೇಶ್ ಜಾರಕಿಹೊಳಿಯವರ ಸೀಡಿಗಳು ಸಹ ಮಾಧ್ಯಮದಲ್ಲಿ ಪ್ರಸಾರವಾಯಿತು ಮತ್ತು ಅದನ್ನು ಅವರು ಒಪ್ಪಿಕೊಂಡರು ಸಹ. ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ಸಹ ನನ್ನ ಬಳಿ ಸಾಕಷ್ಟು ಸೀಡಿಗಳಿದ್ದು ಸಮಯ ಬಂದಾಗ ಬಿಡುಗಡೆ ಮಾಡುವುದಾಗಿ ತಮ್ಮ ಪಾಕೆಟ್ ನಲ್ಲಿ ಪೆನ್ ಡ್ರೈವ್ ಇಟ್ಟುಕೊಂಡು ಓಡಾಡುತ್ತಿದ್ದಾರೆ ಮತ್ತು ಮಾಧ್ಯಮ ಪತ್ರಿಕಾಗೋಷ್ಠಿಗಳಲ್ಲಿ ಹೇಳುತ್ತಿರುತ್ತಾರೆ...

ಈ ರಾಜ್ಯದ ಮತ್ತೊಬ್ಬ ಮಾಜಿ ಮುಖ್ಯಮಂತ್ರಿ ಸದಾನಂದ ಗೌಡರು ಸೇರಿ ಅನೇಕ ಬಾಂಬೆ ಬಾಯ್ಸ್ ಎಂದು ಕರೆಯಲ್ಪಡುವ ಮಾಜಿ ಮಂತ್ರಿಗಳು, ಶಾಸಕರು, ಉದ್ಯಮಿಗಳು, ಚಲನಚಿತ್ರ ನಟರು, ಮಾಜಿ ಉಪಮುಖ್ಯಮಂತ್ರಿ ಈಶ್ವರಪ್ಪನವರ ಪುತ್ರ ಕಾಂತೇಶ್ ಹೀಗೆ ಇನ್ನೂ ಹಲವಾರು ಜನ ಸೀಡಿ ಪ್ರಸಾರವಾಗದಂತೆ ನ್ಯಾಯಾಲಯದಿಂದ ತಡೆಯಾಜ್ಞೆ ತಂದಿದ್ದಾರೆ....

ಇನ್ನೊಂದಷ್ಟು ಜನ ಬಹಿರಂಗವಾಗಿ ಅದನ್ನು ಹೇಳಿಕೊಳ್ಳಲಾಗದೇ ಒಳಗೊಳಗೆ ಎಷ್ಟು ಮಾನಸಿಕ ಹಿಂಸೆ ಅನುಭವಿಸುತ್ತಿದ್ದಾರೋ ಗೊತ್ತಿಲ್ಲ. ಬಹಿರಂಗವಾಗದ ಎಷ್ಟೋ ಸೀಡಿಗಳು ಇನ್ನು ಹಾಗೇ ಇರಬಹುದು. ಒಟ್ಟಿನಲ್ಲಿ ಕರ್ನಾಟಕದಲ್ಲಿ ಸೀಡಿ, ಪೆನ್ ಡ್ರೈವ್ ಗಳ ಪ್ರಹಸನ ಜೋರಾಗಿ ನಡೆಯುತ್ತಿದೆ. ಕಾಲಕ್ಕೆ, ಸಮಯಕ್ಕೆ, ಸಂದರ್ಭಕ್ಕೆ ತಕ್ಕಂತೆ ಅವುಗಳು ಬಿಡುಗಡೆಯಾಗುತ್ತಿವೆ.......

ವಿಶೇಷವೆಂದರೆ, ಇದರಲ್ಲಿ ಬಹುತೇಕ ಸಮಾಜದ ಮುಖ್ಯ ವಾಹಿನಿಯ ಜನರೇ ಭಾಗಿಗಳಾಗಿದ್ದಾರೆ ಅಥವಾ ಪಾತ್ರಧಾರಿಗಳಾಗಿದ್ದಾರೆ. ಸಾಮಾನ್ಯ ಜನರ ಯಾವ ಸೀಡಿಗಳು ಇಲ್ಲಿಯವರೆಗೂ ಹೊರಬಂದಿಲ್ಲ, ಬಂದರೂ ಅದಕ್ಕೆ ಹೆಚ್ಚಿನ ಮಹತ್ವವಿರುವುದಿಲ್ಲ.......

ಇಲ್ಲಿ ನಾವು ಮುಖ್ಯವಾಗಿ ಯೋಚಿಸಬೇಕಿರುವುದು ಸೀಡಿ ಮಾಡುವವರನ್ನೋ, ಸೀಡಿಯಲ್ಲಿ ಪಾತ್ರವಹಿಸುವವರನ್ನೋ ಅಥವಾ ಸೀಡಿಗಳನ್ನು ಹಂಚುವವರನ್ನೋ, ಇವರಲ್ಲಿ ಯಾರನ್ನು ಮುಖ್ಯ ತಪ್ಪಿತಸ್ಥರೆಂದು ಪರಿಗಣಿಸಬೇಕು ಎಂಬುದು ಬಹಳ ಮುಖ್ಯವಾದ ವಿಷಯವಾಗುತ್ತದೆ......

ಒಂದು ವೇಳೆ ಡಿಕೆ ಶಿವಕುಮಾರ್ ಅವರು ನೂರಾರು ಸೀಡಿಗಳನ್ನು ಮಾಡಿಕೊಂಡಿದ್ದು ಅದನ್ನು ಸಮಯ ಸಂದರ್ಭಕ್ಕೆ ತಕ್ಕಂತೆ ಬಹಿರಂಗಪಡಿಸುತ್ತಿದ್ದರೆ ನೈತಿಕವಾಗಿ ಅವರನ್ನು ಮೆಚ್ಚಿ ಅಭಿನಂದಿಸಬೇಕಾಗುತ್ತದೆ. ಕಾನೂನಾತ್ಮಕವಾಗಿ ಅದು ತಪ್ಪು ಅಥವಾ ಅಪರಾಧವಾಗಿದ್ದರು ಸಹ ಇಂತಹ ನೀಚ, ಹೆಣ್ಣಿನ



ಶೋಷಣೆಯ, ದೌರ್ಜನ್ಯದ ಸೀಡಿಗಳನ್ನು ಗುಪ್ತ ಕಾರ್ಯಾಚರಣೆಯ ಮೂಲಕ ಮಾಡಿಕೊಳ್ಳುವ ಧೈರ್ಯ, ಚಾಕಚಕ್ಯತೆ, ತಂತ್ರಗಾರಿಕೆಯನ್ನು ಶ್ರೀ ಶಿವಕುಮಾರ್ ಅವರು ತೋರಿಸಿರುವುದನ್ನು ಈ ವಿಷಯದಲ್ಲಿ ಖಂಡಿತವಾಗಿ ಒಬ್ಬ ಸಭ್ಯ ನಾಗರೀಕರಾಗಿ ಮೆಚ್ಚಲೇಬೇಕಾಗುತ್ತದೆ......

ಯಾವ ಪೊಲೀಸ್, ಯಾವ ಸಮಾಜ ಸೇವಕರು, ಯಾವ ನ್ಯಾಯಾಲಯ, ಯಾವ ಬೇಹುಗಾರಿಕೆ ಸಂಸ್ಥೆಗಳು, ಯಾವ ಪತ್ರಕರ್ತರು ಈ ರೀತಿಯ ಘಟನೆಗಳನ್ನು ಗುರುತಿಸಿ ಬಹಿರಂಗಪಡಿಸಬೇಕಾಗಿತ್ತೋ ಅದನ್ನು ಶಿವಕುಮಾರ್ ಅವರು ಮಾಡುತ್ತಿದ್ದರೆ ಅವರು ಅಭಿನಂದನೆಗೆ ಅರ್ಹರು.....

ಈ ಎಲ್ಲ ಸೀಡಿಗಳು ಅಧಿಕಾರ ದುರುಪಯೋಗದ, ಲೈಂಗಿಕ ಶೋಷಣೆಯ, ದೌರ್ಜನ್ಯದ, ಅಮಾನವೀಯ ನಡವಳಿಕೆಯ ಸಾಕ್ಷಿಗಳಂತಿವೆ. ಒಂದು ವೇಳೆ ಶಿವಕುಮಾರ್ ಅವರ ಸೀಡಿಗಳಿದ್ದರೂ ಸಹ ಅವರ ವಿರೋಧಿಗಳು ಅದನ್ನು ಬಹಿರಂಗಗೊಳಿಸಲಿ. ಈ ಸಮಾಜದ ಕಾಮುಕರ ಮುಖವಾಡ ಹೊರಗೆ ಬೀಳಲಿ.....

ಹಾಗೆಯೇ ಸರ್ಕಾರ ಮತ್ತು ಆಡಳಿತ ನಡೆಸುತ್ತಿರುವವರ ಅಧಿಕಾರ ದುರುಪಯೋಗದ ಮತ್ತು ಅತ್ಯಂತ ಹೀನ ಕೃತ್ಯಗಳು ಬಯಲಾಗಲಿ. ನ್ಯಾಯಾಲಯ ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಸಂಪೂರ್ಣವಾಗಿ ಇದನ್ನು ನಿಯಂತ್ರಣಕ್ಕೆ ತೆಗೆದುಕೊಂಡು ಸ್ವತಃ ಒಂದು ಸುಮೋಟೊ ಕೇಸ್ ದಾಖಲಿಸಿ ತಡೆಯಾಜ್ಞೆ ತಂದ ಎಲ್ಲರ ಸೀಡಿಗಳನ್ನು ಸಂಗ್ರಹಿಸಿ, ರಾಜ್ಯದ ಪೊಲೀಸ್ ಮುಖ್ಯಸ್ಥರಿಗೆ ನೀಡಿ ತನ್ನ ಸುಪರ್ದಿಯಲ್ಲಿಯೇ ತನಿಖೆಗೆ ಒಳಪಡಿಸಿದರೆ ಖಂಡಿತವಾಗಲೂ ಈ ರಾಜ್ಯ ಈ ವಿಷಯದಲ್ಲಿ ಸ್ವಲ್ಪವಾದರೂ ಶುದ್ಧೀಕರಣವಾಗುತ್ತದೆ, ಜೊತೆಗೆ ನಿಜವಾಗಲೂ ಆ ಸೀಡಿಗಳಲ್ಲಿ ದೌರ್ಜನ್ಯಕ್ಕೆ ಒಳಗಾಗಿರುವ ಮಹಿಳೆಯರು, ಸಂತ್ರಸ್ತೆಯರು ನಿಟ್ಟುಸಿರಿ ಬಿಡುತ್ತಾರೆ.....

ಜೊತೆಗೆ ತಪ್ಪಿತಸ್ಥರೆಂದು ಕಂಡುಬಂದರೆ ಅವರಿಗೆ ಈ ಪಾತ್ರಧಾರಿಗಳಿಂದಲೇ ಅವರ ಆಸ್ತಿಯಲ್ಲಿ ದೊಡ್ಡಮಟ್ಟದ ಪರಿಹಾರ ನೀಡಿ ಪರೋಕ್ಷವಾಗಿ ಪುನರ್ವಸತಿ ಕಲ್ಪಿಸಿದಂತಾಗುತ್ತದೆ. ಮಾಜಿ ಮುಖ್ಯಮಂತ್ರಿಗಳು, ಮಂತ್ರಿಗಳು, ಶಾಸಕರು, ಹಿರಿಯ ಅಧಿಕಾರಿಗಳು, ಅವರ ಪುತ್ರರು ಇಡೀ ವ್ಯವಸ್ಥೆಯನ್ನು, ಅದರಲ್ಲೂ ಮಹಿಳೆಯರನ್ನು ಈ ರೀತಿ ಶೋಷಿಸುತ್ತಿರುವ ಸಮಾಜದಲ್ಲಿ ನಾವು ಬದುಕುತ್ತಿರುವುದು ಕೂಡ ಅತ್ಯಂತ ಅಸಹ್ಯ ಮತ್ತು ಅಸಹನೀಯ ಪರಿಸ್ಥಿತಿ ಸೃಷ್ಟಿಸಿದೆ.....

ಇಷ್ಟೆಲ್ಲಾ ದೊಡ್ಡ ದೊಡ್ಡ ಪ್ರಶಸ್ತಿಗಳು, ಸಾಧನೆಗಳು, ಸನ್ಮಾನಗಳು, ಅಧಿಕಾರಿಗಳು, ಹೋರಾಟಗಾರರು, ದಾರ್ಶನಿಕರು, ಪ್ರವಚನಕಾರರು, ಸ್ವಾಮೀಜಿಗಳು, ಪತ್ರಕರ್ತರು ಎಲ್ಲರ ಅರಿವಿನ, ಕಣ್ಣಂಚಿನ ತುದಿಯಲ್ಲಿ ಇಂತಹ ಹೇಸಿಗೆ ಕೃತ್ಯಗಳು ನಡೆಯುವಾಗ ನಮ್ಮನ್ನು ನಾವು ಯಾವ ಸ್ಥಾನದಲ್ಲಿ ನಿಲ್ಲಿಸಿಕೊಳ್ಳಬೇಕು, ನಾವು ಯಾವ ಮೌಲ್ಯವನ್ನು ಹೊಂದಿದ್ದೇವೆ, ನಮ್ಮ ಧೈರ್ಯ, ಶಕ್ತಿ ಸಾಮರ್ಥ್ಯ, ಸೇವೆಗಳಿಗೆ ಯಾವ ಅರ್ಥವಿದೆ ಎಂದು ನನ್ನನ್ನು ಕಾಡುತ್ತಿದೆ.....

ಸಾಮಾನ್ಯ ಜನ ಸಹ ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ನಮಗೆ ಅರಿವಿಲ್ಲದೆ ನಮ್ಮ ಮನೆಯ ಹೆಣ್ಣು ಮಕ್ಕಳೇ ಈ ಜಾಲದಲ್ಲಿ ಸಿಲುಕಿರಬೇಕು ಅಥವಾ ಸಿಲುಕಬಹುದು ಎಂಬ ಮನಸ್ಥಿತಿಯಲ್ಲಿ ಜಾಗೃತವಾಗಿ ಕ್ರಿಮಿನಲ್ ರಾಜಕಾರಣಿಗಳ ಬಣ್ಣ ಬಯಲು ಮಾಡಿ ಅವರನ್ನು ನಿಯಂತ್ರಿಸದಿದ್ದರೆ ಇದೊಂದು ಅತ್ಯಂತ ಅನಾಗರಿಕ, ಅಮಾನವೀಯ ಸಮಾಜವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ.....

ರಾಜಕೀಯದಲ್ಲಿ ಮಹಿಳೆಯರಿಗೆ ಶೇಕಡ 33% ರಷ್ಟು ಮೀಸಲಾತಿ ನೀಡಿ ಪಕ್ಷದ ಕಾರ್ಯಕರ್ತರನ್ನೇ ಲೈಂಗಿಕವಾಗಿ ಶೋಷಿಸಿದರೆ ಅವರು ರಾಜಕೀಯಕ್ಕೆ ಬರುವುದಾದರೂ ಹೇಗೆ. ಈ ಸೀಡಿ ವ್ಯವಹಾರಗಳ ಬಗ್ಗೆ ಮಾತನಾಡುತ್ತಿರುವವರು ಮತ್ತು ಅದರಲ್ಲಿ ತೊಡಗಿಸಿಕೊಂಡಿರುವವರು ಸಾಮಾನ್ಯರಲ್ಲ. ಈ ರಾಜ್ಯದ ಬಹುತೇಕ ಸಂಪನ್ಮೂಲಗಳನ್ನು ಮತ್ತು ನಮ್ಮನ್ನು ನಿಯಂತ್ರಿಸುತ್ತಿರುವ ಮಂತ್ರಿ ಮಹೋದಯರು, ಸ್ವಾಮಿಗಳು, ಉದ್ಯಮಿಗಳು ಮತ್ತು ಅಧಿಕಾರಿ ವರ್ಗದವರು. ಇವರೇ ಸರಿ ಇಲ್ಲ ಎಂದ ಮೇಲೆ ಮತ್ತೆ ಸಮಾಜವನ್ನು ತಿದ್ದುವುದಾದರೂ ಹೇಗೆ. ಒಂದು ಆಡಳಿತ ವ್ಯವಸ್ಥೆ ಸಮಾಜವನ್ನು ಸುಸ್ಥಿತಿಯಲ್ಲಿರಿಸಲು ಸಮಾಜದ ಆದಾಯದ ಶೇಕಡ 50ಕ್ಕೂ ಹೆಚ್ಚು ಹಣವನ್ನು ಖರ್ಚು ಮಾಡುತ್ತಿರುವುದಾದರೂ ಏಕೆ...

ಒಬ್ಬ ಸಂಸದನ ಐದು ವರ್ಷಗಳ ನಿರಂತರ ಲೈಂಗಿಕ ಶೋಷಣೆಯನ್ನು ಒಬ್ಬ ಮಹಿಳೆಯೂ ಪ್ರತಿಭಟಿಸದೆ, ಪೊಲೀಸ್ ಕಂಪ್ಲೇಂಟ್ ನೀಡದೆ, ನ್ಯಾಯಾಲಯಕ್ಕೆ ಅರ್ಜಿ ಹಾಕದೆ ಭಯಪಟ್ಟು ಸಹಿಸಿಕೊಂಡಿದ್ದಾರೆಂದರೆ ಅದಕ್ಕಿಂತ ನಾಚಿಕೆಗೇಡಿನ ವ್ಯವಸ್ಥೆ ಯಾವುದಿದೆ. ಮಂತ್ರಿ, ಶಾಸಕರು, ಮಾಜಿ ಮುಖ್ಯಮಂತ್ರಿಗಳು ಸೀಡಿಗಳನ್ನು ಜೇಬಲ್ಲಿಟ್ಟುಕೊಂಡು ಓಡಾಡುವುದು, ಇನ್ನೊಬ್ಬರ ಬಳಿ ಅಷ್ಟು ಸಂಗ್ರಹ ಇದೆ, ಇಷ್ಟು ಸಂಗ್ರಹ ಇದೆ ಎಂದು ಹೇಳುವುದು, ಇದನ್ನೆಲ್ಲ ಪೊಲೀಸ್ ವ್ಯವಸ್ಥೆ ನೋಡಿಕೊಂಡು ಸುಮ್ಮನಿರುವುದು, ಜನರು ಸಹ ಇದನ್ನು ಮನರಂಜನೆ ಎಂಬಂತೆ ಭಾವಿಸಿರುವುದು ಎಲ್ಲವೂ ಅನಾಗರಿಕ ಸಮಾಜದ, ಮುಖವಾಡದ ವ್ಯವಸ್ಥೆಯಂತೆ ಕಾಣುತ್ತಿದೆ.....


ಹೆಣ್ಣಿನ ಶೀಲವನ್ನು ಪವಿತ್ರಗೊಳಿಸಿ, ಆ ಪಾವಿತ್ರ್ಯತೆಯಲ್ಲಿ ಅವರನ್ನು ಶೋಷಿಸುತ್ತಾ, ಸಮ ಸಮಾಜದ ಆಶಯಗಳಿಗೆ ಚೂರಿ ಹಾಕುತ್ತಿರುವ ಈ ಮುಖ್ಯ ವಾಹಿನಿಯ ನಾಯಕರುಗಳಿಗೆ ಧಿಕ್ಕಾರ ಕೂಗಿದರೆ ಅದು ಸಣ್ಣ ಪದವಾಗುತ್ತದೆ. ಈಗ ನಿಜಕ್ಕೂ ಪ್ರಬುದ್ಧ ಮನಸ್ಸುಗಳು ಕಾರ್ಯಯೋನ್ಮುಖವಾಗುವ ಸಮಯ ಬಂದಿದೆ. ಒಂದು ನಾಗರಿಕ ಸಮಾಜ ಇಷ್ಟೊಂದು ಕೆಳಹಂತಕ್ಕೆ ನಮ್ಮ ಕಾಲದಲ್ಲೇ ಬಂದಿರುವುದು ವಿಷಾದನೀಯ.....

ಹೆಣ್ಣನ್ನು ಭೋಗದ ವಸ್ತುವೆಂದು ನೇರವಾಗಿ ಉಪಯೋಗಿಸಿಕೊಳ್ಳುತ್ತಿರುವುದು ಕರ್ನಾಟಕದಲ್ಲಿ ಕಣ್ಣಿಗೆ ಕಾಣುವಷ್ಟು ಸ್ಪಷ್ಟವಾಗಿ ಗೋಚರಿಸುತ್ತಿದೆ. ಕನಿಷ್ಠ ಈ ಪ್ರಜ್ವಲ್ ರೇವಣ್ಣನ ಪ್ರಕರಣದ ಹಿನ್ನೆಲೆಯಲ್ಲಿ ಆದರೂ ಈ ಪೆನ್ ಡ್ರೈವ್, ಸೀಡಿಗಳಿಗೆ ಒಂದು ಅಂತ್ಯ ಹಾಡಲೇಬೇಕಿದೆ....

ಮಹಿಳೆಯರ ಘನತೆಯನ್ನು ಎತ್ತಿ ಹಿಡಿಯಬೇಕಿದೆ. ಇದೇನೋ ಅವರಿಗೆ ನಾವು ಕೊಡುವ ಸಹಾನುಭೂತಿ, ಉದಾರತೆ, ಭಿಕ್ಷೆಯಲ್ಲ. ಮಹಿಳೆಯ ಸಮಾನತೆ, ಸ್ವಾತಂತ್ರ್ಯ ಆಕೆಯ ಹಕ್ಕು......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T